ವಿಜಯಪುರ | ಸಂಪುಟ 01 | ಸಂಚಿಕೆ 305 | ಪುಟ 4 | ₹ 3.00

https://udayarashminews.com

udayarashmi 7026028778

# ಉದಯ ರಶ್ಮಿ

ಜನಪರ-ಜೀವಪರ

ಸಂಪಾದಕ : ಇಂದುಶೇಖರ ಮಣೂರ

ಕನ್ನಡ ದಿನಪತ್ರಿಕೆ

editor.udayarashmi@gmail.com RNI NO: KARKAN/2023/86203 ಬುಧವಾರ, ಜನವರಿ 31, 2024



"ಸಾರ್ವಜನಿಕರು, ವಿದ್ಯಾರ್ಥಿಗಳು ಗಾಂಧಿಭವನಕ್ಕೆ ಭೇಟಿ ನೀಡುವ ಮೂಲಕ ಮಹಾತ್ಮ ಗಾಂಧೀಜಿಯವರ ತತ್ವಾದರ್ಶಗಳ ಕುರಿತು ಅರಿತುಕೊಳ್ಳಬೇಕು. ಇಂದಿನ ಪೀಳಿಗೆ ಗಾಂಧೀಜಿ ಅವರ ಚಿಂತನೆ- ವಿಚಾರಗಳನ್ನು ಅರಿತುಕೊಳ್ಳಬೇಕು."

– ಟಿ.ಭೂಬಾಲನ್
ಜಿಲ್ಲಾಧಿಕಾರಿಗಳು, ವಿಜಯಪುರ

### ಮಾಜಿ ಸಿಎಂ ಎಚ್.ಡಿ.ಕುಮಾರಸ್ವಾಮಿ ವಿರುದ್ಧ ಡಿಸಿಎಂ ಡಿ.ಕೆ.ಶಿವಕುಮಾರ ವಾಗ್ದಾಳಿ

# ಬಿಜೆಪಿಯಲ್ಲಿ ಜೆಡಿಎಸ್ ಬಹುತೇಕ ವಿಲೀನ! :ಡಿಕೆಶಿ

ಬೆಂಗಳೂರು: 'ಕುಮಾರಸ್ವಾಮಿ ಅವರು ಜೆಡಿಎಸ್ ಪಕ್ಷವನ್ನು ಬಿಜೆಪಿಯಲ್ಲಿ ಬಹುತೇಕ ವಿಲೀನ ಮಾಡಿದ್ದಾರೆ' ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಹೇಳಿದ್ದಾರೆ.

ಕುಮಾರಸ್ವಾಮಿ ಅವರು ಮಂಡ್ಯದಲ್ಲಿ ಕೇಸರಿ ಶಾಲು ಧರಿಸಿ ಬಿಜೆಪಿ ನಾಯಕರ ಜತೆ ಪ್ರತಿಭಟನೆ ಮಾಡಿದ ಬಗ್ಗೆ ಮಾಧ್ಯಮದವರು ಕೇಳಿದಾಗ, 'ಇದು ಅವರ ಪಕ್ಷದ ವಿಚಾರ, ಅವರು ಏನಾದರೂ ಮಾಡಿಕೊಳ್ಳಲಿ. ನಮಗೂ ಅದಕ್ಕೂ ಸಂಬಂಧವಿಲ್ಲ. ಅವರು ಯಾವ ಬಣ್ಣದ ಶಾಲನ್ನಾದರೂ ಧರಿಸಲಿ. ಬಿಜೆಪಿಗೆ ಮಂಡ್ಯದಲ್ಲಿ ರಾಜಕೀಯ ನೆಲೆ ಇಲ್ಲ. ಅಲ್ಲಿ ನೆಲೆ ಕಂಡುಕೊಳ್ಳಲು ಇವರಿಬ್ಬರಲ್ಲಿ ಯಾರು ಯಾರನ್ನು ನುಂಗುತ್ತಾರೋ ಗೊತ್ತಿಲ್ಲ' ಎಂದರು.

ಶಾಂತಿ ಕದಡಬೇಕು, ಕಾನೂನು ಸುವ್ಯವಸ್ಥೆಗೆ ಧಕ್ಕೆ ತರಬೇಕು ಎಂದು ಮುಗ್ಧ ಹಳ್ಳಿ ಜನರನ್ನು ಎತ್ತಿಕಟ್ಟುತ್ತಿದ್ದಾರೆ. ನಮ್ಮ ಭಾಗದ ಎಲ್ಲಾ ಜಾತಿ ಹಾಗೂ ಧರ್ಮದ ಜನರು ಬಹಳ ಸೌಹಾರ್ದತೆಯಿಂದ ಅಣ್ಣ-ತಮ್ಮಂದಿರಂತೆ ಬದುಕುತ್ತಿದ್ದರು. ನಮ್ಮ ಕಡೆ ಊರ ಹಬ್ಬ ಮಾಡುವಾಗ ಯಾವರೀತಿ ಮಾಡುತ್ತಾರೆ ಎಂದು ನೀವು ನೋಡಿದ್ದೀರಲ್ಲಾ? ಈಗ ಅವರು ಹೊಸ ಪ್ರಯೋಗ ಮಾಡುತ್ತಿದ್ದಾರೆ' ಎಂದು ಮಂಡ್ಯದಲ್ಲಿ ಕೇಸರಿ ಧ್ವಜದ ಬಗ್ಗೆ ಬಿಜೆಪಿ ಪ್ರತಿಭಟನೆ ಬಗ್ಗೆ ಪ್ರತಿಕ್ರಿಯಿಸಿದರು.

ಕೆರಗೋಡಿನಲ್ಲಿ ಕಾನೂನು ಬಾಹಿರವಾಗಿ ಕೇಸರಿ ಧ್ವಜ ಹಾರಿಸಿರುವ ಬಗ್ಗೆ ಕೇಳಿದಾಗ, 'ಪಂಚಾಯ್ತಿಯವರು ರಾಷ್ಟ್ರಧ್ವಜ ಹಾಗೂ ಕನ್ನಡ ಧ್ವಜ ಮಾತ್ರ ಹಾರಿಸುವುದಾಗಿ ಮುಚ್ಚಳಿಕೆ ಬರೆದುಕೊಟ್ಟಿದ್ದಾರೆ. ರಾಷ್ಟ್ರ ಧ್ವಜ ಹಾಗೂ ಕನ್ನಡ ಬಾವುಟಕ್ಕೆ ಗೌರವ ನೀಡಬೇಕು. ಕನ್ನಡದಲ್ಲೇ ನಾಮಫಲಕ ಇರಬೇಕು ಎಂದೂ ನಾವು ಕಾನೂನು ಮಾಡಿದ್ದೇವೆ. ಈ ಬಗ್ಗೆ ಸುಗ್ರೀವಾಜ್ಞೆ ಹೊರಡಿಸಿದ್ದೆವು. ಇದಕ್ಕೆ ರಾಜ್ಯಪಾಲರು ಅಂಕಿತ ಹಾಕಬಹುದಾಗಿತ್ತು. ಆದರೆ, ಅವರು ವಿಧಾನ ಮಂಡಲ ಅಧಿವೇಶನದಲ್ಲೇ ಜಾರಿ ಮಾಡಲು ಹೇಳಿದ್ದಾರೆ. ರಾಷ್ಟ್ರ ಧ್ವಜ, ಸಂವಿಧಾನಕ್ಕೆ ಏನು ಗೌರವ ನೀಡಬೇಕೋ ಆ ಗೌರವ ನೀಡುವುದು ನಮ್ಮ ಬದ್ಧತೆ. ಜನ ಎಲ್ಲವನ್ನು ಗಂಭೀರವಾಗಿ ಗಮನಿಸುತ್ತಿದ್ದಾರೆ' ಎಂದು ತಿಳಿಸಿದರು.

ಬಿಜೆಪಿಯವರು ಮನೆ-ಮನೆಗೆ ಹನುಮಧ್ವಜ ಹಂಚುವ ಬಗ್ಗೆ ಕೇಳಿದಾಗ, 'ಬೇಡ ಎಂದು ಹೇಳಿದವರು ಯಾರು? ಬಿಜೆಪಿಯವರು ಹರ್ ಘರ್ ತಿರಂಗಾ ಎಂದು ಪ್ರಚಾರ ಮಾಡಿದ್ದರು. ಈಗ ಆ ತಿರಂಗಾವನ್ನು ಯಾಕೆ ಮರೆತಿದ್ದಾರೆ? ಬಿಜೆಪಿ ಕೇಂದ್ರದಲ್ಲಿ ಅಧಿಕಾರದಲ್ಲಿದೆ. ತಿರಂಗಾ ಬದಲಿಗೆ ಕೇಸರಿ ಧ್ವಜವನ್ನೇ ಕಾನೂನು ಮೂಲಕ ತರಲಿ, ಬೇಡ ಎಂದವರು ಯಾರು' ಎಂದು ಪ್ರಶ್ನಿಸಿದರು.



### ಜಲಸಂಪನ್ಮೂಲ ಸಚಿವ, ಡಿಸಿಎಂ ಡಿ.ಕೆ.ಶಿವಕುಮಾರಗೆ ಮನವಿ | ಸಚಿವ ಶಿವಾನಂದ ಪಾಟೀಲ ಸ್ಪಷ್ಟನೆ

# ಫೆ. ಮೊದಲ ವಾರ ಅವಳಿ ಜಿಲ್ಲೆಯ ಕೆರೆಗಳಿಗೆ ನೀರು

**ಉದಯರಶ್ಮಿ ನ್ಯೂಸ್**

ಬಸವನಬಾಗೇವಾಡಿ: ಬೇಸಿಗೆ ಕಾಲದಲ್ಲಿ ವಿಜಯಪುರ-ಬಾಗಲಕೋಟ ಅವಳಿ ಜಿಲ್ಲೆಯ ಜನರಿಗೆ ಹಾಗೂ ಜಾನುವಾರುಗಳ ಕುಡಿಯುವ ನೀರಿನ ಬವಣೆ ಉಂಟಾಗಬಾರದು ಎಂಬ ಉದ್ದೇಶದಿಂದ ಆಲಮಟ್ಟಿ ಜಲಾಶಯದಿಂದ ಅವಳಿ ಜಿಲ್ಲೆಯಲ್ಲಿರುವ ಎಲ್ಲ ಕೆರೆಗಳಿಗೆ ನೀರು ಹರಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡುವಂತೆ ಜಲಸಂಪನ್ಮೂಲ ಸಚಿವ, ಡಿಸಿಎಂ ಡಿ.ಕೆ.ಶಿವಕುಮಾರ ಅವರಿಗೆ ಮನವಿ ಮಾಡಲಾಗಿದೆ. ನೀರಿನ ಬವಣೆ ನಿವಾರಿಸಲು ಫೆಬ್ರುವರಿ ಮೊದಲ ವಾರದಲ್ಲಿ ಅವಳಿ ಜಿಲ್ಲೆಯ ಅಂದಾಜು 175 ಕೆರೆಗಳಿಗೆ ನೀರು ಹರಿಸಲಾಗುವುದು ಎಂದು ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವ, ಹಾವೇರಿ ಉಸ್ತುವಾರಿ ಸಚಿವ ಶಿವಾನಂದ ಪಾಟೀಲ ಹೇಳಿದರು.

ಪಟ್ಟಣದ ಡಿಸಿಸಿ ಬ್ಯಾಂಕಿನ ಸಭಾಂಗಣದಲ್ಲಿ ಮಂಗಳವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಿಲ್ಲೆಯ ಕೊಲ್ಹಾರ, ಬಸವನಬಾಗೇವಾಡಿ, ನಿಡಗುಂದಿ ತಾಲೂಕುಗಳು ಬರಗಾಲಕ್ಕೆ ಒಳಗಾಗಿರುವದರಿಂದಾಗಿ ತೀವ್ರ ಕುಡಿಯುವ ನೀರಿನ ತೊಂದರೆ ಉಂಟಾಗಿರುತ್ತದೆ. ತಾಲೂಕುಗಳಲ್ಲಿ ಜನ-ಜಾನುವಾರುಗಳಿಗೆ ತುರ್ತಾಗಿ ಕುಡಿಯುವ ನೀರನ್ನು ಒದಗಿಸಬೇಕಾಗಿದೆ. ಮುಳವಾಡ ಏತ ನೀರಾವರಿ ಯೋಜನೆಯ ಅಚ್ಚುಕಟ್ಟು ಪ್ರದೇಶದ ವ್ಯಾಪ್ತಿಯಲ್ಲಿ ಬರುವ ಕೊಲ್ಹಾರ, ನಿಡಗುಂದಿ ಮತ್ತು ಬಸವನಬಾಗೇವಾಡಿ ತಾಲೂಕುಗಳ ರೈತರು ಜನ-ಜಾನುವಾರುಗಳಿಗೆ ಕುಡಿಯುವ ನೀರಿನ ಸಂಬಂಧ ಮತ್ತು ಕೆರೆಗಳನ್ನು ತುಂಬಿಸುವ ಸಂಬಂಧ ಕಾಲುವೆಗಳಿಗೆ ನೀರು




ಹರಿಸುವಂತೆ ಒತ್ತಾಯಿಸುತ್ತಿದ್ದಾರೆ. ಅವರು ಯಾವುದೇ ಕಾನೂನು ಕೈಗೆ ತೆಗೆದುಕೊಳ್ಳದೇ ಸಂಯಮದಿಂದ ಇರಬೇಕು. ನೀರಾವರಿ ಸಲಹಾ ಸಮಿತಿಯಲ್ಲಿ ನಿರ್ಣಯವಾದ್ದಂತೆ ಅವಳಿ ಜಿಲ್ಲೆಯಲ್ಲಿ ಕುಡಿಯುವ ನೀರಿನ ಭವಣೆ ನಿವಾರಿಸಲು ಕೆರೆಗಳಿಗೆ ಜಲಾಶಯದಿಂದ ನೀರು ತುಂಬಿಸಲಾಗುವುದು. ಕೆರೆ ತುಂಬುವ ಯೋಜನೆಗೋಸ್ಕರ 6 ಟಿಎಂಸಿ ನೀರನ್ನು ನಿಗದಿಪಡಿಸಿದ್ದು, ಫೆಬ್ರುವರಿ ಮೊದಲ ವಾರದಲ್ಲಿ 1.5 ಟಿಎಂಸಿ ನೀರನ್ನು ಕೆರೆಗಳಿಗೆ ಬಿಡಲಾಗುವುದು. ಜನರು ಆತಂಕ ಪಡಬಾರದು ಎಂದರು.

ಈಗಾಗಲೇ ಕೃಷ್ಣಾ ಭಾಗ್ಯ ಜಲ ನಿಗಮದಿಂದ 2023-24 ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಕೃಷ್ಣಾ ಮೇಲ್ದಂಡೆ ಯೋಜನೆಯ ಅಣೆಕಟ್ಟುಗಳ ವ್ಯಾಪ್ತಿಯಲ್ಲಿ ಬರುವ ನೀರಾವರಿ ಯೋಜನೆಗಳಾದ ನಾರಾಯಣಪುರ ಎಡದಂಡೆ ಹಾಗೂ ಬಲದಂಡೆ ಮತ್ತು ಆಲಮಟ್ಟಿ ಎಡದಂಡೆ ಹಾಗೂ ಬಲದಂಡೆ ಕಾಲುವೆಗಳಿಗೆ ರೈತರ ಅನುಕೂಲಕ್ಕಾಗಿ ಮೆಣಸಿನಕಾಯಿ ಹಾಗೂ ಬಾಕಿ ಉಳಿದಿರುವ ಬೆಳೆಗಳನ್ನು ಸಂರಕ್ಷಿಸುವ ಸಲುವಾಗಿ 2.75 ಟಿಎಂಸಿ ನೀರನ್ನು ಜ.6 ರಂದು ಕೈಗೊಂಡಿರುವ ನಿಗಮದ ನಿರ್ಣಯದಂತೆ ನೀರನ್ನು ಬಿಡಲಾಗಿದೆ ಎಂದರು.

### ರಾಜ ನುಡಿ

ಸಂತನೊಬ್ಬ ಹೇಳಿದಂತೆ ಪ್ರಾಣಿ, ಮರ ಮತ್ತು ಮನುಷ್ಯ ಈ ಮೂವರಿಗೂ ಜೀವವಿದೆ. ಆದರೆ ಅರಿವು ಮನುಷ್ಯನಿಗೆ ಮಾತ್ರ ಇರುವಂತದ್ದು. ಆದರೂ ಅರಿವಿಲ್ಲದಂತೆ ಬದುಕುತ್ತಾನೆ ಎನ್ನುವುದೇ ವಿಪರ್ಯಾಸ.

-ಡಾ. ರಾಜಶೇಖರ ನಾಗೂರ



### ವಚನ ಚಿಂತನ 290

**ಅಂಗ ಲಿಂಗವನಗಲದ ಪೂಜೆ**

*ಅಂಗೈಯೊಳಗಣ ಲಿಂಗವ ಪೂಜಿಸುತ್ತ,*
*ಮಂಗಳಾರತಿಗಳನು ತೊಳಗಿ ಬೆಳಗುತ್ತಲಿರ್ದ ನೋಡಯ್ಯಾ.*
*ಕಂಗಳ ನೋಟ, ಕರುವಿಟ್ಟ ಭಾವ, ಹಿಂಗದ ಮೋಹ*
*ತೆರಹಿಲ್ಲದಿರ್ದ ನೋಡಯ್ಯಾ,*
*ಚೆನ್ನಮಲ್ಲಿಕಾರ್ಜುನಯ್ಯಾ,*
*ನಿಮ್ಮನಗಲದ ಪೂಜೆ ಅನುವಾಯಿತ್ತೆನಗೆ.*
*– ಅಕ್ಕಮಹಾದೇವಿಯವರು*

ಅಂಗವು ಲಿಂಗವನ್ನು ಆವರಿಸಿಕೊಳ್ಳುವ ಪ್ರಕ್ರೀಯೆಯಲ್ಲಿ ಇಷ್ಟಲಿಂಗಪೂಜೆಯ ತಲ್ಲೀನತೆಯನ್ನು ವಿವರಿಸುತ್ತ, ಅಂಗ ಮತ್ತು ಲಿಂಗವು ಒಂದನೊಂದು ಅಗಲದೆ ಇರುವ ಸಂಬಂಧವನ್ನು ಈ ವಚನದಲ್ಲಿ ಅಕ್ಕನವರು ತಿಳಿಸುತ್ತ, ಲಿಂಗದ ಆವ್ಹಾನೆಗೆ ಅಂಗವನ್ನು ಸಿದ್ಧಗೊಳಿಸುತ್ತ ಅಂತರಂಗವನ್ನು ಶುದ್ಧಿಕರಿಸುತ್ತಿರುವೆ ಎನ್ನುವಲ್ಲಿ ಮಂಗಳಾರತಿಗಳನು ತೊಳಗಿ ಬೆಳಗುತ್ತಲಿರ್ದ ನೋಡಯ್ಯಾ. ಎಂದಿರುವರು. ಲಿಂಗದ ಮೇಲೆ ನೆಟ್ಟದೃಷ್ಟಿಯು ತಾಯಬಿಟ್ಟು ಅಗಲದ ಕರುವಿನ ತೆರನಾಗಿದೆ, ಉಂಬ ಹಾಲು ಸಾಕೆನಿಸಿದಾಗ ಮತ್ತೆ ತಾಯಸಾನಿದ್ಯ ಬಿಡದ ಹಿಂಗದ ಲಿಂಗದ ಮೋಹ ಅದು, ಈ ಪರಿಯಲ್ಲಿ ಅಂಗೈಯಲ್ಲಿನ ಚೆನ್ನಮಲ್ಲಿಕಾರ್ಜುನನ ಬಿಟ್ಟಗಲದ ಪೂಜೆ ಅಕ್ಕನದಾಗಿತ್ತು ಇದು ಅಂಗ ಲಿಂಗವನಗಲದ ಪೂಜೆ.

-ರುದ್ರೇಶ ಕಿತ್ತೂರ, ಮುದ್ದೇಬಿಹಾಳ

### ಕಡಣಿಯ ಬೆರಗು ಪ್ರಕಾಶನ ಸಂಸ್ಥೆಯಿಂದ 30 ಪುಸ್ತಕಗಳ ಲೋಕಾರ್ಪಣೆ | ಬೆರಗು ಪ್ರಶಸ್ತಿ ಪ್ರದಾನ

# ಬೆರಗು ಪ್ರಕಾಶನದಿಂದ ಅಕ್ಷರ ಕ್ರಾಂತಿ :ಶಾಸಕ ಮನಗೂಳಿ

**ಉದಯರಶ್ಮಿ ನ್ಯೂಸ್**

ಆಲಮೇಲ: ಬಸವಣ್ಣನವರ ನಾಡು ವಿಜಯಪುರ ಜಿಲ್ಲೆ ನಿರಂತರವಾಗಿ ಬರಗಾಲದಿಂದ ಬಳಲಿದರೂ ಅನ್ನ ದಾಸೋಹ, ಅಕ್ಷರ ಜ್ಞಾನದ ದಾಸೋಹಕ್ಕೆ ಯಾವುದೆ ಬರವಿಲ್ಲ ಎಂದು ಹಿರಿಯ ಸಾಹಿತಿ ಡಾ। ಸಂಗಮನಾಥ ಲೋಕಾಪೂರ ಹೇಳಿದರು.

ಮಂಗಳವಾರ ಕಡಣಿಯ ಪಿ.ಬಿ. ಕಾಲೇಜು ಆವರಣದಲ್ಲಿ ಕಡಣಿಯ ಬೆರಗು ಪ್ರಕಾಶನ ಸಂಸ್ಥೆ ಹಮ್ಮಿಕೊಂಡ ಜ್ಞಾನಯೋಗಿ ಸಿದ್ದೇಶ್ವರ ಶ್ರೀಗಳ ಸ್ಮರಣಾರ್ಥ ಹಮ್ಮಿಕೊಂಡಿದ್ದ 30 ಪುಸ್ತಕಗಳ ಲೋಕಾರ್ಪಣೆ ಹಾಗೂ ಬೆರಗು ಪ್ರಶಸ್ತಿ ಪ್ರದಾನ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ವಿಜಯಪುರ ಜಿಲ್ಲೆಯ ಶರಣ-ರು, ಸಂತರು, ಸಾಹಿತಿಗಳು ವಿವಿದ ಕ್ಷೇತ್ರದಲ್ಲಿ ಮಹಾನ್ ಸಾಧನೆ ಮಾಡಿ ನಾಡಿನಾದ್ಯಂತ ಹೆಸರು ಮಾಡಿದ್ದಾರೆ ಇತಿಹಾಸದ ಪುಟದಲ್ಲಿ ಉಳಿದುಕೊಂಡಿದ್ದಾರೆ. ವಿಜಯಪುರ ಜಿಲ್ಲೆ ಬರಗಾಲದಿಂದ ಬಳಲಿದರೂ ಇಂದಿರಾಗಾಂಧಿ ಅವರನ್ನು ಬಂಗಾರದಲ್ಲಿ ತೂಗಿದಂತಹ ವಿಶಾಲ ಮನೋಭಾವ ಹೊಂದಿದ ಜನರು ಇಲ್ಲಿದ್ದಾರೆ ಎಂದರು.

ಶಾಸಕ ಅಶೋಕ ಮನಗೂಳಿ 30 ಪುಸ್ತಕಗಳ ಲೋಕಾರ್ಪಣೆ ಮಾಡಿ ಮಾತನಾಡಿ, ಗ್ರಾಮೀಣ ಭಾಗದ ಯುವ ಸಾಹಿತಿಗಳ ಮತ್ತು ಬಡ ಸಾಹಿತಿಗಳಿಗೆ ಪ್ರೋತ್ಸಾಹ ನೀಡಲು ಕಡಣಿಯ ಬೆರಗು ಪ್ರಕಾಶನದವರು ಅವರ ಕೃತಿಗಳನ್ನು ಪ್ರಕಟಣೆ ಮಾಡುವ ಮೂಲಕ ಪುಸ್ತಕದ ಕ್ರಾಂತಿ ಮಾಡುತ್ತಿದ್ದಾರೆ. ಪುಸ್ತಕ ಪ್ರಕಟಣೆ ಕೆಲಸ ಕಷ್ಟದ ಕೆಲಸವಾದರೂ ಗ್ರಾಮೀಣ ಭಾಗದಲ್ಲಿ ಬೆರಗು ಪ್ರಕಾಶನ ಪ್ರಾರಂಭಿಸಿ ಮೂರು ನಾಲ್ಕು ವರ್ಷದಲ್ಲಿ ನೂರಕ್ಕು ಹೆಚ್ಚು ಪುಸ್ತಕಗಳನ್ನು ಪ್ರಕಟಿಸಿರುವುದು ಶ್ಲಾಘನಿಯ. ಇಂತಹ ಪ್ರಕಾಶನಗಳಿಗೆ ಪ್ರೋತ್ಸಾಹ ನೀಡಿದರೆ ಲೇಖಕರ ವಿಚಾರಧಾರೆಗಳು ಹೊರಬರಲು



ಸಾದ್ಯವಾಗುವುದು ಎಂದರು.

ಬೆರಗು ಪ್ರಕಾಶನ ಸಂಸ್ಥೆಯವರು ನೀಡುವ ಪ್ರಶಸ್ತಿಗೆ ನಮ್ಮ ತಂದೆ ದಿ. ಎಂ.ಸಿ. ಮನಗೂಳಿ ಅವರ ಹೆಸರಿನಲ್ಲಿ ಪ್ರತಿ ವರ್ಷ ರೂ.25 ಸಾವಿರ ಪ್ರಶಸ್ತಿಗೆ ದೇಣಿಗೆ ನೀಡುವುದಾಗಿ ವಾಗ್ದಾನ ಮಾಡಿದ ಶಾಸಕ ಮನಗೂಳಿ,

ಆಲಮೇಲ ತಾಲೂಕಿನ ಬೆರಗು ಮತ್ತು ಸಿಂದಗಿಯ ನೆಲೆ ಈ ಎರಡೂ ಪ್ರಕಾಶನ ಸಂಸ್ಥೆಗಳು ನಾಡಿನಾದ್ಯಂತ ಅಕ್ಷರದ ಕ್ರಾಂತಿ ಮಾಡುತ್ತಿವೆ ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ ಗುಲಬರ್ಗಾ ವಿವಿಯ ಕನ್ನಡ ವಿಭಾಗದ ಮುಖ್ಯಸ್ಥ ಡಾ। ಎಚ್.ಟಿ. ಪೋತೆ ಮಾತನಾಡಿ, ಅಕ್ಷರದಂತ ಜ್ಞಾನದ ಕ್ರಾಂತಿ ಎಲ್ಲಿ ಇರುತ್ತದೆಯೋ ಅಲ್ಲಿ ಸಮಾನತೆ ಇರುತ್ತದೆ. ಅದಕ್ಕೆ ಅಕ್ಷರದ ಕ್ರಾಂತಿ ನಿರಂತರವಾಗಿರಬೇಕು ಎಂದು ಹೇಳಿದರು.

2023ನೇ ಸಾಲಿನ ಬೆರಗು ಸಮಗ್ರ ಸಾಹಿತ್ಯ ಪ್ರಶಸ್ತಿಯನ್ನು ಹಿರಿಯ ಸಾಹಿತಿ ದಾರವಾಡದ ಡಾ। ಸಂಗಮನಾಥ ಲೋಕಾಪೂರ ಅವರಿಗೆ ಪ್ರಶಸ್ತಿ ಫಲಕ ಸ್ಮರಣಿಕೆ ಹಾಗೂ ರೂ.10 ಸಾವಿರ ನಗದು ನೀಡಿ ಶಾಸಕ ಮನಗೂಳಿ ಗೌರವಿಸಿದರು.

ಬೆರಗು ಪುಸ್ತಕ ಪ್ರಶಸ್ತಿಯನ್ನು ದಿ. ಯಮನಾಬಾಯಿ ಭೋವಿ ಅವರ ಸ್ಮರಣಾರ್ಥ ಧರೆಗೆ ದೊಡ್ಡವರು ಕಾದಂಬರಿ ಲೇಖಕ ಡಾ। ಲಕ್ಷ್ಮಣ ಕೌಂಟೆ ಅವರಿಗೆ ಸ್ಮರಣಿಕೆ ಮತ್ತು ರೂ.5 ಸಾವಿರ ನಗದಿನೊಂದಿಗೆ ಪ್ರದಾನ ಮಾಡಲಾಯಿತು.

ಜಿಲ್ಲಾ ಕಸಾಪ ಅಧ್ಯಕ್ಷ ಹಾಸಿಂಪೀರ ವಾಲೀಕಾರ, ಡಾ। ಲಕ್ಷ್ಮಣ ಕೌಂಟೆ ಮಾತನಾಡಿದರು.

ಕಡಣಿ ಗ್ರಾ.ಪಂ ಅಧ್ಯಕ್ಷ ಬಸಲಿಂಗಪ್ಪ ಕತ್ತಿ, ಭೋಗಣ್ಣ ಲಾಳಸಂಗಿ, ಬಸವರಾಜ ತಾವರಗೇರಿ, ಬೆರಗು ಪ್ರಕಾಶನ ಸಂಸ್ಥೆ ಅಧ್ಯಕ್ಷೆ ವಿಜಯಲಕ್ಷ್ಮೀ ಕತ್ತಿ, ಪ್ರಾಚಾರ್ಯ ಆರ್.ಎಸ್. ಗಂಗನಳ್ಳಿ ಉಪಸ್ಥಿತ-ರಿದ್ದರು.

ಹಿರಿಯ ಸಾಹಿತಿಗಳಾದ ಡಾ। ಚನ್ನಪ್ಪ ಕಟ್ಟಿ, ಡಾ। ಎಂ.ಎಂ. ಪಡಶೆಟ್ಟಿ, ಸಿದ್ದರಾಮ ಉಪ್ಪಿನ, ಕಸಾಪ ತಾಲೂಕ ಅಧ್ಯಕ್ಷ ಶಿವಶರಣ ಗುಂದಗಿ, ರಾಜಣ್ಣ ಭೋವಿ, ಅವಧೂತ ಬಂಡಗಾರ, ಉಮೇಶ ಕ್ಷತ್ರಿ ಹಾಗೂ 30 ಪುಸ್ತಕಗಳ ಲೇಖಕರು, ದಾನಿಗಳು ಇದ್ದರು.

### ಆಲಮೇಲದಲ್ಲಿ ದಲಿತ ಹಾಗೂ ವಿವಿಧ ಸಂಘಟನೆಗಳ ಸಹಯೋಗದಲ್ಲಿ ಬೃಹತ್ ಪ್ರತಿಭಟನೆ

# ಅಂಬೇಡ್ಕರ್ ಪುತ್ಥಳಿಗೆ ಅವಮಾನ :ಆರೋಪಿಗಳ ಗಡಿಪಾರಿಗೆ ಆಗ್ರಹ

**ಉದಯರಶ್ಮಿ ನ್ಯೂಸ್**

ಆಲಮೇಲ: ಕಲ್ಬುರ್ಗಿಯಲ್ಲಿ ಅಂಬೇಡ್ಕರ್ ಪುತ್ಥಳಿಗೆ ಅವಮಾನ ಮಾಡಿರುವ ಆರೋಪಿಗಳನ್ನು ಕೂಡಲೇ ಗಡಿಪಾರು ಮಾಡಬೇಕು ಎಂದು ಆಗ್ರಹಿಸಿ ಮಂಗಳವಾರ ಆಲಮೇಲದಲ್ಲಿ ದಲಿತ ಹಾಗೂ ವಿವಿಧ ಸಂಘಟನೆಗಳ ಸಹಯೋಗದಲ್ಲಿ ಬೃಹತ್ ಪ್ರತಿಭಟನೆ ನಡೆಸಿ ಟಾಯರ್‌ಗೆ ಬೆಂಕಿ ಹಚ್ಚಿ ಆಕ್ರೋಶ ವ್ಯಕ್ತ ಪಡಿಸಿ ತಹಸೀಲ್ದಾರ ಅವರಿಗೆ ಎಲ್ಲ ಪ್ರತಿಭಟನಾಕಾರರು ಮನವಿ ಸಲ್ಲಿಸಿದರು.

ನಂತರ ಹಿರಿಯ ದಲಿತ ಮುಖಂಡ ಜಗದೀಶ ದಾಳಿ ಮಾತನಾಡಿ, ದೀನ ದಲಿತರು ಹಾಗೂ




ಅಲ್ಪ ಸಂಖ್ಯಾತರ ಮೂರ್ತಿಗಳಿಗೆ ಅವಮಾನ ಮಾಡುವ ಮೂಲಕ ದೇಶದಲ್ಲಿ ಅಶಾಂತಿ ವಾತಾವರಣ ನಿರ್ಮಿಸಿ ರಾಜಕೀಯವಾಗಿ ಲಾಭ ಪಡೆಯಬೇಕು ಎಂಬ ಉದ್ದೇಶ ಹೊಂದಿರುವ ಮನುವಾದಿ ರಾಜಕೀಯ ವ್ಯಕ್ತಿಗಳಿಗೆ ಮುಂದಿನ ದಿನಮಾನದಲ್ಲಿ ಸರಿಯಾಗಿ ಪಾಠ ಕಲಿಸುವ ಮೂಲಕ ಸಂವಿಧಾನ ಹಾಗೂ ಬಾಬಾಸಾಹೇಬರ ವಿಚಾರಗಳನ್ನು ಉಳಿಸಿಕೊಳ್ಳಬೇಕು ಎಂದು ಹೆಳಿದರು

ದಲಿತ ಯುವ ಮುಖಂಡ ಹ-ರೀಶ ಯಂಟಮನ ಮಾತನಾಡಿ, ಡಾ। ಬಿ.ಆರ್. ಅಂಬೇಡ್ಕರರ ಮೂರ್ತಿಗೆ ಅವಮಾನ ಮಾಡಿರುವ ಆರೋಪಿಗಳ ಆಸ್ತಿಗಳನ್ನು ಸರ್ಕಾರ ಮುಟ್ಟುಗೋಲು ಹಾಕಿಕೊಳ್ಳಬೇಕು. ಹಾಗೂ ಈ ಕೃತ್ಯದ ಹಿಂದೆ ಇರುವ ಕಾಣದ ಕೈಗಳ ಪತ್ತೆ ಹಚ್ಚಿ ಅವರನ್ನು ಗಡಿಪಾರು ಮಾಡಬೇಕು. ಇಲ್ಲದಿದ್ದರೆ ದೇಶಾದ್ಯಂತ ಉಗ್ರ ಹೋರಾಟ ಮಾಡಬೇಕಾಗುತ್ತದೆ. ದೇಶದ್ರೋಹಿಗಳಾದ ಇವರ ಪರ ನ್ಯಾಯಾಲಯದಲ್ಲಿ ಯಾವ ನ್ಯಾಯವಾದಿಗಳೂ ವಕಾಲತ್ತು ನಡೆಸಬಾರದು ಎಂದು ವಿನಂತಿಸಿಕೊಂಡರು.

ಶಿವುಕುಮಾರ ಮೇಲಿನಮನಿ, ಬ್ಲಾಕ್ ಅಧ್ಯಕ್ಷ ಮೋಹ್ಮದ ಸಾಧೀಕ ಸುಂಬಡ, ಪರಶುರಾಮ ಕಾಂಬಳೆ ಮಾತನಾಡಿದರು.

ಮುಖಂಡರಾದ ಗುಂಡು ಮೇಲಿನಮನಿ, ಸಂಜು ಮೇಲಿನಮನಿ, ಶಶಿಧರ ನಾಯ್ಕೋಡಿ, ಪವನ ಕಾಳೆ, ರಾಹುಲ್ ಯಂಟಮನ, ಸಂತೋಷ ಮೇಲಿನಮನಿ, ಮಂಜುನಾಥ ಯಂಟಮನ, ಶಿವುಕುಮಾರ ಮೇಲಿನಮನಿ, ಅಂಬಾದಾಸ ಬಿಳಂಬಗಿ, ಶಿವು ರಾಂಪುರ, ಬಶೀರ ತಾಂಬೋಳ್ಳಿ, ಹಾಗೂ ಅಪಾರ ಸಂಖ್ಯೆಯಲ್ಲಿ ಮಹಿಳೆಯರು ಪಾಲ್ಗೊಂಡಿದ್ದರು.

# ನಿಡಗುಂದಿ: ಹುತಾತ್ಮ ಜಯಂತಿ ಆಚರಣೆ



**ಉದಯರಶ್ಮಿ ನ್ಯೂಸ್**

ನಿಡಗುಂದಿ: ಅಹಿಂಸೆ ಮತ್ತು ಶಾಂತಿ ಎಂಬ ಅಸ್ತ್ರದಿಂದಲೇ ಭಾರತಕ್ಕೆ ಸ್ವಾತಂತ್ರ್ಯ ತಂದುಕೊಡುವಲ್ಲಿ ಪ್ರಮುಖ ಪಾತ್ರ ವಹಿಸಿದ ಮಹಾತ್ಮಗಾಂಧಿಯವರ 76 ನೇ ಪುಣ್ಯ ತಿಥಿ ಆಚರಿಸಲಾಗುತ್ತಿದೆ ಎಂದು ಗ್ರಾಮದ ಹಿರಿಯರಾದ ಶಿವನಗೌಡ ಪಾಟೀಲ ಹೇಳಿದರು.

ಅವರು ಪಟ್ಟಣದ ಹೊರವಲಯದ ಮಣಗೂರ ಸರ್ಕಾರಿ ಪ್ರೌಢಶಾಲೆಯಲ್ಲಿ ಮಂಗಳವಾರ ನಡೆದ ಹುತಾತ್ಮ ದಿನಾಚರಣೆಯಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

1948 ಜನವರಿ 30 ರಂದು ಪ್ರಾರ್ಥನೆಗೆಂದು ಬಿರ್ಲಾ ಹೌಸ್ ಗೆ ತೆರಳಿದ್ದ ಅವರ ಮೇಲೆ ಗೋಡ್ಸೆ ಗುಂಡಿಕ್ಕಿದ ಪರಿಣಾಮ ಅವರು ಇಹಲೋಕ ತ್ಯಜಿಸಿದ್ದರು. ಜನವರಿ 30 ರಂದು ಗಾಂಧಿ ಮತ್ತು ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಡಿದ, ಮಡಿದ ಅಸಂಖ್ಯ ಹುತಾತ್ಮರಿಗೆ ನಮಿಸುವ ದಿನ ಎಂದರು.

ಪ್ರಭಾರ ಮುಖ್ಯ ಶಿಕ್ಷಕ ಶಿವಪ್ಪ ಪೂಜೇರ, ಶಿಕ್ಷಕಿ ಪದ್ಮಾವತಿ ದಾಸರ ಮಾತನಾಡಿ, ದೇಶಕ್ಕಾಗಿ ಪ್ರಾಣತೆತ್ತ ಇನ್ನಿತರ ಮಹಾತ್ಮರ ಬಲಿದಾನವನ್ನು ಸ್ಮರಿಸಿದರು.

ಎಸ್.ಬಿ. ಪಾಟೀಲ, ಟಿ.ನಿಂಗಪ್ಪ, ಯು.ಎಂ. ಪ್ರಧಾನಿ, ಸಿ.ಐ. ಪಾಟೀಲ, ಎನ್.ಬಿ. ಬಾಗವಾನ, ಆರ್.ಎನ್. ಮಂಡಿ ಇದ್ದರು.

# ವಂದಾಲದಲ್ಲಿ ಗ್ರಾಮದೇವತೆಯ ಸಾಂಸ್ಕೃತಿಕ ವೈಭವ



**ಉದಯರಶ್ಮಿ ನ್ಯೂಸ್**

ನಿಡಗುಂದಿ: ತಾಲ್ಲೂಕಿನ ವಂದಾಲ ಬನಶಂಕರಿ ದೇವಿ ಜಾತ್ರೆಯ ಅಂಗವಾಗಿ ಮಂಗಳವಾರ, ಕನ್ನಡ ನಾಡಿನ ಗತವೈಭವ ನೆನಪಿಸುವ ಸಾಂಸ್ಕೃತಿಕ ಕಲೆಗಳಲ್ಲೊಂದಾದ ಗ್ರಾಮದೇವತೆ (ದ್ಯಾಮವ್ವ ತಾಯಿ) ಯ ಸೋಗಿನ ಮೆರವಣಿಗೆ ಸಹಸ್ರಾರು ಭಕ್ತರ ಸಮ್ಮುಖದಲ್ಲಿ ಜರುಗಿತು.

ಗ್ರಾಮದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಸಾಗಿ ಬಂದಾಗ ಜಾತ್ರೆಗೆ ಬಂದ ಯಾತ್ರಿಕರೆಲ್ಲ ಭಾವ ಪರವಶರಾಗಿ ಭಕ್ತಿಯಿಂದ ನಮಿಸಿದರು. ಗ್ರಾಮದೇವತೆಯ ವೇಶದಲ್ಲಿ ಮಲ್ಲಿಕಾರ್ಜುನ ಕುಪ್ಪಸ್ತ ಕಂಗೊಳಿಸಿದರೆ, ಪೂಜಾರರಾಗಿ ಗೌತಮ ಜಾಲಿಮಿಂಚಿ, ಸುದರ್ಶನ ಹೆಬ್ಬಾಳ, ಚಾಮರ ಬೀಸುವ ಅಂಗರಕ್ಷಕರಾಗಿ ರಾಘವೇಂದ್ರ ವಡವಡಗಿ, ಸಂದೀಪ ಕುಪ್ಪಸ್ತ, ಪೋತರಾಜನಾಗಿ ಬಸವರಾಜ ಇಂಗಳೇಶ್ವರ ಜನಮನ ಸೂರೆಗೊಂಡರು.

ಡೊಳ್ಳು ಕುಣಿತ ವಾದಕರಾಗಿ ಅಂಬರೀಶ್ ಹೆಬ್ಬಾಳ, ನವೀನ ಕೊಳ್ಳಿ, ವಿಜಯ ಪತಂಗೆ, ಶಂಕರ ಸರೂರ, ಸಂಗಮೇಶ ಜಾಲಿಮಿಂಚಿ, ಶಶಿಕುಮಾರ ಅರಳಿಚಂಡಿ, ಸಚಿನ ಪ್ಯಾಟಿಗೌಡ್ರ, ಮಹಾಂತೇಶ ತೆಳಗಡಿ ಗಮನ ಸೆಳೆದರು.

# ಡಿ.ಎನ್.ಅಕ್ಕಿಗೆ ಬೇಂದ್ರೆ ಪ್ರಶಸ್ತಿ ಪ್ರಧಾನ

**ಉದಯರಶ್ಮಿ ನ್ಯೂಸ್**



ಯಡ್ರಾಮಿ: ನಾಡಿನ ಖ್ಯಾತ ಸಂಶೋಧಕ-ಸಾಹಿತಿ ಡಿ.ಎನ್.ಅಕ್ಕಿಗೋಗಿ ಅವರ ಸಾಹಿತ್ಯಿಕ ಸೇವೆಯನ್ನು ಗುರುತಿಸಿ ಕನ್ನಡಪರ ಹೋರಾಟಗಾರ ಬಸವರಾಜ ಪಡುಕೋಟೆ ಸಾರಥ್ಯದ ನಮ್ಮ ಕರ್ನಾಟಕ ಸೇನೆ ಬೆಂಗಳೂರಿನ ಅರಮನೆ ಗಾಯತ್ರಿ ಮೈದಾನದಲ್ಲಿ ರವಿವಾರ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ದ.ರಾ.ಬೇಂದ್ರೆ ಪ್ರಶಸ್ತಿ ಪ್ರಧಾನ ಮಾಡಿ ಗೌರವಿಲಾಯಿತು.

ಸಂಗಮ ಹರ್ಷ: ಡಿ.ಎನ್. ಅಕ್ಕಿ ಅವರು ದ.ರಾ.ಬೇಂದ್ರೆ ಪ್ರಶಸ್ತಿ ಸ್ವೀಕರಿಸಿದ ಈ ಸಂದರ್ಭದಲ್ಲಿ ಯಡ್ರಾಮಿ ಸಗರಾದ್ರಿ ಸಾಂಸ್ಕೃತಿಕ ಸಂಗಮ ಟ್ರಸ್ಟ್ ನ ಅಧ್ಯಕ್ಷ ಸಿದ್ಧಲಿಂಗ ಮಹಾಸ್ವಾಮಿಗಳು, ಪ್ರಕಾಶ ಸಾಹು ಬೆಲ್ಲದ, ಪ್ರಶಾಂತ ಅಂಗಡಿ, ಆರ್.ಜಿ.ಪುರಾಣಿಕ, ಬಸವರಾಜ ಅರಕೇರಿ, ಸಿದ್ದು ಹೂಗಾರ, ಪತ್ರಕರ್ತ ಮಲ್ಲಿಕಾರ್ಜುನ, ಲೇಖಕ ಕಿಶೋರ್ ಕುಮಾರ್, ಪತ್ರಕರ್ತ ವಿಜಯೇಂದ್ರ ಕುಲಕರ್ಣಿ, ಇತರರು ಹರ್ಷ ವ್ಯಕ್ತಪಡಿಸಿ, ಅಭಿನಂದನೆ ತಿಳಿಸಿದ್ದಾರೆ.

# ಚಿತ್ರಕಲೆ: ವಿನಾಯಕ ರಾಜ್ಯಮಟ್ಟಕ್ಕೆ ಆಯ್ಕೆ

**ಉದಯರಶ್ಮಿ ನ್ಯೂಸ್**

ಆಲಮಟ್ಟಿ: ಕರ್ನಾಟಕ ಸರ್ಕಾರದ ಪುರಾತತ್ವ ಸಂಗ್ರಹಾಲಯ ಮತ್ತು ಪರಂಪರೆ ಇಲಾಖೆ ಮೈಸೂರು ಹಾಗೂ ಶಾಲಾ ಶಿಕ್ಷಣ ಇಲಾಖೆಯ ಆಶ್ರಯದಲ್ಲಿ "ಪ್ರಾಚ್ಯ ಪ್ರಜ್ಞೆ' ಕಾರ್ಯಕ್ರಮದ ಅಂಗವಾಗಿ ನಡೆದ ಜಿಲ್ಲಾ ಮಟ್ಟದ ಚಿತ್ರಕಲಾ ಸ್ಪರ್ಧೆಯಲ್ಲಿ ತಾಲ್ಲೂಕಿನ ಗಣಿ ಗ್ರಾಮದ ವಿದ್ಯಾರ್ಥಿ ಪ್ರಥಮ ಸ್ಥಾನ ಪಡೆದು ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿದ್ದಾನೆ.



ಗಣಿ ಸರ್ಕಾರಿ ಪ್ರೌಢಶಾಲೆಯ ವಿದ್ಯಾರ್ಥಿ ವಿನಾಯಕ ಚಿತ್ರಗಾರ ರಾಜ್ಯ ಮಟ್ಟಕ್ಕೆ ಆಯ್ಕೆಯಾದ ವಿದ್ಯಾರ್ಥಿ.

ಆ ಶಾಲೆಯಲ್ಲಿ ಚಿತ್ರಕಲಾ ಶಿಕ್ಷಕರ ಹುದ್ದೆ ಇಲ್ಲ. ಸ್ವಯಂ ಪ್ರೇರಣೆಯಿಂದ ಕಲಿತಿರುವ ವಿದ್ಯಾರ್ಥಿಗೆ ಮುಖ್ಯ ಶಿಕ್ಷಕ ರವಿ ಚಿನಗುಂಡೆ ಮಾರ್ಗದರ್ಶನ ನೀಡಿದ್ದಾರೆ.

## ಕಾನಿಪ ಸಂಘದ ಪತ್ರಕರ್ತರಿಗೆ ಹೆಲ್ತ್ ಕಾರ್ಡ್ ವಿತರಿಸಿದ ಸಚಿವ ಎಂ.ಬಿ.ಪಾಟೀಲ ಭರವಸೆ

# ಪತ್ರಕರ್ತರಿಗೆ ಆರೋಗ್ಯ ಸೇವೆ ಕಲ್ಪಿಸಲು ಬಿಎಲ್ಡಿಇ ಬದ್ಧ

**ಉದಯರಶ್ಮಿ ನ್ಯೂಸ್**



ವಿಜಯಪುರ: ಸದಾ ಒತ್ತಡದಲ್ಲೇ ಕಾರ್ಯನಿರ್ವಹಿಸುವ ಪತ್ರಕರ್ತರು ಸಮಯಕ್ಕೆ ಸರಿಯಾಗಿ ಆಹಾರ, ನಿದ್ರೆ ಮಾಡಲ್ಲ. ಅಂಥ ಪತ್ರಕರ್ತರಿಗೆ ಆರೋಗ್ಯ ಸೇವೆ ಕಲ್ಪಿಸಲು ಬಿಎಲ್ ಡಿಇ ಆಸ್ಪತ್ರೆ ಬದ್ಧವಾಗಿದೆ ಎಂದು ಬಿಎಲ್ ಡಿ ಸಂಸ್ಥೆಯ ಅಧ್ಯಕ್ಷರೂ ಆಗಿರುವ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಮತ್ತು ಮೂಲ ಸೌಕರ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ಹೇಳಿದರು.

ನಗರದ ಬಿಎಲ್ ಡಿಇ ಆಸ್ಪತ್ರೆಯ ಟ್ರಾಮಾ ಸೆಂಟರ್ ಸಭಾಂಗಣದಲ್ಲಿ ಸೋಮವಾರ ಬಿಎಲ್ ಡಿಇ ಆಸ್ಪತ್ರೆಯ ಆರೋಗ್ಯ ಭಾಗ್ಯ ಯೋಜನೆಯಡಿ ವಿಜಯಪುರ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಸದಸ್ಯರಿಗೆ ಫ್ಯಾಮಿಲಿ ಹೆಲ್ತ್ ಕಾರ್ಡ್ ವಿತರಿಸಿ ಅವರು ಮಾತನಾಡಿದರು.

ಅದೆಷ್ಟೋ ಪತ್ರಕರ್ತರು ವಿಶ್ರಾಂತಿ ತೆಗೆದುಕೊಳ್ಳದೇ, ಸಮಾಜಕ್ಕಾಗಿ ಹಗಲಿರುಳು ಶ್ರಮಿಸುತ್ತಾರೆ. ಅಂಥ ಪತ್ರಕರ್ತರು ಹಾಗೂ ಅವರ ಕುಟುಂಬ ಸದಸ್ಯರ ಆರೋಗ್ಯ ರಕ್ಷಣೆಗೆ ಸೇವಾ ಸೌಲಭ್ಯಗಳನ್ನು ಒದಗಿಸಲು ಬಿಎಲ್ ಡಿಇ ಆಸ್ಪತ್ರೆ ಮುಂದಾಗಿದೆ ಎಂದರು.

ಪತ್ರಕರ್ತರ ಕಷ್ಟದ ಜೀವನ ಕಂಡಿದ್ದೇವೆ. ಅವರ ಆರ್ಥಿಕ ಪರಿಸ್ಥಿತಿಯೂ ಅಷ್ಟಕ್ಕಷ್ಟೇ ಇರುತ್ತದೆ ಎಂಬುದನ್ನು ಮನಗಂಡು ನಾನು ಪತ್ರಿಕಾ ದಿನಾಚರಣೆಯಲ್ಲಿ ಹೆಲ್ತ್ ಕಾರ್ಡ್ ನೀಡುವುದಾಗಿ ಭರವಸೆ ನೀಡಿದ್ದೆ. ಈಗ ಅದು ಸಾಕಾರಗೊಂಡಿದೆ ಎಂದರು.

ಈ ಕಾರ್ಡಿನಡಿ ಪತ್ರಕರ್ತರಿಗೆ ಹಾಗೂ ಅವರ ಕುಟುಂಬ ಸದಸ್ಯರಿಗೂ ನಮ್ಮ ಬಿಎಲ್ ಡಿ ಈ ಆಸ್ಪತ್ರೆಯಲ್ಲಿ ರಿಯಾಯಿತಿ ದರದಲ್ಲಿ ಗುಣಮಟ್ಟದ ಆರೋಗ್ಯ ಸೇವೆ ಕಲ್ಪಿಸಲಾಗುವುದು ಎಂದರು.

ಪತ್ರಕರ್ತರು ಯಾವುದೇ ಸಂದರ್ಭದಲ್ಲಿ ಅನಾರೋಗ್ಯ ಸಮಸ್ಯೆಗಳಿಗಾಗಿ ಈ ಕಾರ್ಡ್ ಬಳಸಿಕೊಂಡು ಆರೋಗ್ಯ ಸೇವೆ ಪಡೆದುಕೊಳ್ಳಬೇಕು ಎಂದರು.

ಇಂಡಿಯಾ ಟುಡೇ ಯಾರ್ಂಕಿಂಗ್‌ನಲ್ಲಿ ಬಿಎಲ್ಡಿಇ ಡೀಮ್ಡ್ ವಿವಿ 14 ನೇ ಸ್ಥಾನದಲ್ಲಿದ್ದು ರಾಷ್ಟ್ರೀಯಮಟ್ಟದಲ್ಲಿ ಉತ್ತಮ ಶೈಕ್ಷಣಿಕ ಗುಣಮಟ್ಟ ಕಾಯ್ದುಕೊಂಡಿದ್ದೇವೆ. ಆಸ್ಪತ್ರೆಯಲ್ಲಿ ಅತ್ಯಾಧುನಿಕ ಸೇವಾಸೌಲಭ್ಯಗಳ ಮೂಲಕ ಈಗಾಗಲೇ ಯಶಸ್ವಿಯಾಗಿ ತೆರೆದ ಹೃದಯ ಶಸ್ತ್ರಚಿಕಿತ್ಸೆ ಹಾಗೂ ಕಿಡ್ನಿ ಕಸಿ ಶಸ್ತ್ರಚಿಕಿತ್ಸೆ ಯಶಸ್ವಿಯಾಗಿ ನೆರವೇರಿಸಲಾಗಿದೆ. ಈಗಿರುವ 80 ಹಾಸಿಗೆಯ ಆಸ್ಪತ್ರೆಯನ್ನು ಇನ್ನೂ 200 ಬೆಡ್ ಗಳಿಗೆ ಮೇಲ್ದರ್ಜೆಗೇರಿಸಿ 300 ಹಾಸಿಗೆಗಳ ಸುಸಜ್ಜಿತ ಆಸ್ಪತ್ರೆ ಜೊತೆಗೆ ಕ್ಯಾನ್ಸರ್ ಆಸ್ಪತ್ರೆ ಸಹ ನಿರ್ಮಿಸಲಾಗುತ್ತಿದ್ದು, ಎರಡು ವರ್ಷದಲ್ಲಿ ಪೂರ್ಣಗೊಳಿಸಿ ಜನಾರ್ಪಣೆ ಗೊಳಿಸುವ ಕೆಲಸ ಮಾಡುತ್ತೇವೆ ಎಂದರು.

ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ಸಂಗಮೇಶ ಚೂರಿ ಮಾತನಾಡಿ, ಜಿಲ್ಲೆಯ ಪತ್ರಕರ್ತರಿಗೆ ಪಾಲಿಗೆ ಇಂದು ಐತಿಹಾಸಿಕ ದಿನ. ಜಿಲ್ಲೆಯ ಪ್ರತಿಷ್ಠಿತ ಬಿಎಲ್ ಡಿ ಇ ಸಂಸ್ಥೆಯ ಅಧ್ಯಕ್ಷರಾಗಿರುವ ಸಚಿವ ಎಂ.ಬಿ.ಪಾಟೀಲರು ವಾಗ್ದಾನ ಮಾಡಿದಂತೆ ತ್ವರಿತವಾಗಿ ಪತ್ರಕರ್ತರಿಗೆ ಆರೋಗ್ಯ ಕಾರ್ಡ್ ನೀಡಿ, ನುಡಿದಂತೆ ನಡೆದುಕೊಂಡಿದ್ದಾರೆ ಎನ್ನುವ ಮೂಲಕ ಸಚಿವರನ್ನು ಸಂಘದ ಸದಸ್ಯರ ಪರವಾಗಿ ಅಭಿನಂದಿಸಿದರು.

ಕಳೆದ ವರ್ಷ ಮೃತಪಟ್ಟ ಪತ್ರಕರ್ತರಾದ ಶರಣು ಪಾಟೀಲ ಹಾಗೂ ಅಬ್ದುಲ್‌ರಜಾಕ್ ಶಿವಣಗಿ ಅವರ ಕುಟುಂಬ ಸದಸ್ಯರ ಪರಿಸ್ಥಿತಿ ಚಿಂತಾಜನಕವಾಗಿದೆ. ಹಾಗಾಗಿ ಇವರ ಕುಟುಂಬಕ್ಕೆ ಸಿಎಂ ಪರಿಹಾರ ನಿಧಿ ಮಂಜೂರು ಮಾಡಿಸಬೇಕೆಂದು ಮನವಿ ಮಾಡಿದರು.

ನಗರದ ಪತ್ರಕರ್ತರಿಗೆ ನಿವೇಶನ ಕೊಡಿಸುವ ನಿಟ್ಟಿನಲ್ಲಿ ಖಾಲಿ ಬಿದ್ದಿರುವ ಹೌಸಿಂಗ್ ಬೋರ್ಡ್ ಜಾಗೆಯ ಬಗ್ಗೆ ಅಧಿಕಾರಿಗಳಿಂದ ಮಾಹಿತಿ ಪಡೆದು, ಅಲ್ಲಿ ಸೂಕ್ತವೆನಿಸಿದರೆ ನಗರದ ಪತ್ರಕರ್ತರಿಗೆ ಹಣ ನಿಗದಿ ಮಾಡಿ ನಿವೇಶನ ಒದಗಿಸಲು ಸಚಿವರಿಗೆ ಮನವಿ ಮಾಡಿದರು. ಬಿಎಲ್ ಡಿ ಇ ಫೆಮಿಲ್ ಹೆಲ್ತ್ ಕಾರ್ಡ್ ಗೆ ಇನ್ನೂ ಅರ್ಜಿ ಸಲ್ಲಿಸದಿರುವ ಪತ್ರಕರ್ತರು ಈಗಲೂ ಅರ್ಜಿ ಸಲ್ಲಿಸಿದರೆ ಕಾರ್ಡ್ ಮಾಡಿಸಿಕೊಡಲಾಗುವುದು ಎಂದರು.

ಸಚಿವ ಎಂ.ಬಿ.ಪಾಟೀಲರು ಜಿಲ್ಲಾ ಕಾನಿಪ ಸಂಘದ ಪದಾಧಿಕಾರಿಗಳಿಗೆ ಹಾಗೂ ತಾಲ್ಲೂಕು ಘಟಕಗಳ ಅಧ್ಯಕ್ಷರು, ಪ್ರಧಾನ ಕಾರ್ಯದರ್ಶಿಗಳಿಗೆ ಬಿಎಲ್ಡಿಈ ಆಸ್ಪತ್ರೆಯ ಫ್ಯಾಮಿಲ್ ಹೆಲ್ತ್ ಕಾರ್ಡ್ ಆರೋಗ್ಯ ಕಾರ್ಡ್ ಗಳನ್ನು ಸಾಂಕೇತಿಕವಾಗಿ ವಿತರಿಸಿದರು.



ಇದೇ ವೇಳೆ ಸಚಿವರಿಗೆ ಜಿಲ್ಲಾ ಕಾನಿಪ ಸಂಘದಿಂದ ಸನ್ಮಾನಿಸಿ ಗೌರವಾಭಿನಂದನೆ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಬಿ.ಎಲ್.ಡಿ.ಇ ಡೀಮ್ಡ್ ವಿವಿಯ ಕುಲಪತಿ ಡಾ. ಆರ್. ಎಸ್. ಮುಧೋಳ, ಪ್ರಾಚಾರ್ಯ ಡಾ. ಅರವಿಂದ ಪಾಟೀಲ, ಸಮಕುಲಾಧಿಪತಿ ಡಾ. ವೈ. ಎಂ. ಜಯರಾಜ, ಸಚಿವರ ಸಾರ್ವಜನಿಕ ಸಂಪರ್ಕಾಧಿಕಾರಿ ಡಾ.ಮಹಾಂತೇಶ ಬಿರಾದಾರ, ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮೋಹನ ಕುಲಕರ್ಣಿ, ರಾಷ್ಟ್ರೀಯ ಕಾರ್ಯಕಾರಿಣಿ ಸದಸ್ಯ ಮಹೇಶ ವಿ. ಶಟಗಾರ, ರಾಜ್ಯ ಕಾರ್ಯಕಾರಿಣಿ ಸದಸ್ಯ ಡಿ.ಬಿ.ವಡವಡಗಿ, ಜಿಲ್ಲಾ ಉಪಾಧ್ಯಕ್ಷರಾದ ಇಂದುಶೇಖರ ಮಣೂರ, ಫಿರೋಜ್ ರೋಜಿಂದಾರ, ಕಾರ್ಯದರ್ಶಿ ಶಕೀಲ್ ಬಾಗಮಾರೆ, ಕಾರ್ಯಕಾರಿಣಿ ಬಸವರಾಜ ಉಳ್ಳಾಗಡ್ಡಿ, ಗುರು ಗದ್ದನಕೇರಿ, ವಿಜಯ ಸಾರವಾಡ, ಸುರೇಶ ತೇರದಾಳ, ಸುನೀಲ್ ಗೋಡೆಣ್ಣವರ, ಶಶಿಕಾಂತ ಮೆಂಡೆಗಾರ,ನಾಗು ನಾಗೂರ, ಪತ್ರಕರ್ತರಾದ ಅಶೋಕ ಯಡಳ್ಳಿ, ಅಲ್ಲಮಪ್ರಭು ಮಲ್ಲಿಕಾರ್ಜುನಮಠ, ದೀಪಕ ಶಿಂತ್ರೆ, ಜಿ.ಎಸ್.ಕಮತರ,

ಬಸವನಬಾಗೇವಾಡಿ ತಾಲೂಕು ಅಧ್ಯಕ್ಷ ಅಜೀಜ್ ಬಳಬಟ್ಟಿ, ಪ್ರ. ಕಾರ್ಯದರ್ಶಿ ಬಾಬು ವಾಡೇದ, ಆಲಮೇಲ ಪ್ರ. ಕಾರ್ಯದರ್ಶಿ ಅವಧೂತ ಭಂಡಗಾರ, ಸಿಂದಗಿ ಅಧ್ಯಕ್ಷ ಆನಂದ ಶಾಬಾದಿ, ದೇವರಹಿಪ್ಪರಗಿ ಅಧ್ಯಕ್ಷ ಸಂಗಮೇಶ ಉತ್ನಾಳ, ಪ್ರ. ಕಾರ್ಯದರ್ಶಿ ಶಿವಾನಂದ ಕಂಬಾರ, ತಿಕೋಟಾ ಅಧ್ಯಕ್ಷ ಸಿ.ಬಿ. ಹಿರೇಮಠ, ಪ್ರ.ಕಾರ್ಯದರ್ಶಿ ಸಾತಲಿಂಗಯ್ಯ ಹಿರೇಮಠ, ಇಂಡಿ ಅಧ್ಯಕ್ಷ ಅಬುಶಾಮ ಹವಾಲ್ದಾರ್, ಕೊಲ್ಹಾರ ಪ್ರಧಾನ ಕಾರ್ಯದರ್ಶಿ ಅರುಣ ಔರಸಂಗ, ಚಡಚಣ ಅಧ್ಯಕ್ಷ ರಮೇಶ ಬಿರಾದಾರ, ಪ್ರ. ಕಾರ್ಯದರ್ಶಿ ರಾಜಶೇಖರ ಡೊಣಜಮಠ, ತಾಳಿಕೋಟೆ ತಾಲೂಕು ಅಧ್ಯಕ್ಷ ಕಟ್ಟಿಮನಿ, ಜಿಲ್ಲಾ ಕಾರ್ಯಕಾರಿ ಸಮಿತಿ ಸದಸ್ಯರು, ತಾಲೂಕು ಘಟಕಗಳ ಅಧ್ಯಕ್ಷರು, ಪ್ರಧಾನ ಕಾರ್ಯದರ್ಶಿಗಳು ಸೇರಿದಂತೆ ಸದಸ್ಯರು ಪಾಲ್ಗೊಂಡಿದ್ದರು.

> "ಬಿಎಲ್ ಡಿ ಇ ಸಂಸ್ಥೆಯ ಸಂಸ್ಥಾಪಕರಾದ ವಚನ ಪಿತಾಮಹ ಡಾ. ಫ.ಗು ಹಳಕಟ್ಟಿಯವರು ಸಹ ಮಾಧ್ಯಮದಲ್ಲಿದ್ದವರು. ಇವರೊಂದಿಗೆ ಬಂಥನಾಳ ಶಿವಯೋಗಿಗಳು ಹಾಗೂ ತಂದೆಯವರಾದ ಬಿ.ಎಂ ಪಾಟೀಲರು ಜನರಿಗೆ ಉತ್ತಮ ಶಿಕ್ಷಣ ಹಾಗೂ ಆರೋಗ್ಯ ಸೇವೆ ಒದಗಿಸುವ ನಿಟ್ಟಿನಲ್ಲಿ ಬಿಎಲ್ಡಿಈ ಸಂಸ್ಥೆಯಡಿ ಹಂತಹಂತವಾಗಿ ಹಲವಾರು ಶೈಕ್ಷಣಿಕ ಕೇಂದ್ರಗಳನ್ನು, ಮೆಡಿಕಲ್ ಕಾಲೇಜು, ಆಸ್ಪತ್ರೆಯನ್ನು ಸ್ಥಾಪಿಸಿ ಜನರಿಗೆ ಅರ್ಪಿಸಿದ್ದು ಸಂಸ್ಥೆ ಇಂದು ಹೆಮ್ಮರವಾಗಿ ಬೆಳೆದಿದೆ. ಈ ಮೂವರು ಮಹನೀಯರನ್ನು ಬಿಎಲ್ಡಿಇ ಸಂಸ್ಥೆ ಎಂದಿಗೂ ಸ್ಮರಿಸುತ್ತದೆ."
>
> **– ಎಂ.ಬಿ.ಪಾಟೀಲ, ಸಚಿವರು**

# ಶ್ರದ್ಧೆಯಿಂದ ಓದಿದರೆ ಸಾಧನೆ ಸಾಧ್ಯ :ಡಿವೈಎಸ್ಪಿ ಧನಗರ

**ಉದಯರಶ್ಮಿ ನ್ಯೂಸ್**




ತಿಕೋಟಾ: ವಿದ್ಯಾರ್ಥಿ ಜೀವನದಲ್ಲಿ ಮಕ್ಕಳು ಉತ್ತಮ ಶಿಕ್ಷಣ ಪಡೆದು ಉಜ್ವಲ ಭವಿಷ್ಯ ರೂಪಿಸಿಕೊಳ್ಳಬೇಕಾದರೆ ತಾಳ್ಮೆ ಹಾಗೂ ಶ್ರದ್ದೆಯಿಂದ ಓದಿದರೆ ಜೀವನದಲ್ಲಿ ಪ್ರಯತ್ನಕ್ಕೆ ತಕ್ಕ ಫಲ ದೊರೆಯುತ್ತದೆ ಎಂದು ವಿಜಯಪುರ ಡಿವೈಎಸ್ಪಿ ಧೂಳಪ್ಪ ಎಸ್. ಧನಗರ ಹೇಳಿದರು.

ತಾಲ್ಲೂಕಿನ ಘೋಣಸಗಿ ಗ್ರಾಮದಲ್ಲಿ ರವಿವಾರ ಸಂಜೆ ಕೌಲಗುಡ್ಡದ ಸಿದ್ದಶ್ರೀ ಸಂಸ್ಥೆಯ ಕರಿಯೋಗಸಿದ್ದ ಪ್ರಾಥಮಿಕ ಶಾಲೆ ಹಾಗೂ ಸಿದ್ದರತ್ನ ಪ್ರೌಢ ಶಾಲೆಯ ದಶಮಾನೋತ್ಸವ ನಿಮಿತ್ಯ ನಡೆದ ಹೊಂಬೆಳಕು ಕಾರ್ಯಕ್ರಮದಲ್ಲಿ ಅತಿಥಿಯಾಗಿ ಭಾಗವಹಿಸಿ ಅವರು ಮಾತನಾಡಿದರು.

ಸಿಕ್ಕ ಸಮಯವನ್ನು ಸದುಪಯೋಗ ಪಡಿಸಿಕೊಂಡು ನಕಾರಾತ್ಮಕ ಚಿಂತನೆಗಳನ್ನು ದೂರಮಾಡಿ ಸಕಾರಾತ್ಮಕ ಚಿಂತನೆ ಅಳವಡಿಸಿಕೊಂಡರೆ ಜೀವನದಲ್ಲಿ ಯಶಸ್ವಿಯಾಗುತ್ತದೆ. ಮಕ್ಕಳ ಮೇಲೆ ಮಾನಸಿಕವಾಗಿ ಒತ್ತಡ ಹೇರಬೇಡಿ. ಮುಂದೆ ಗುರಿ ಇರಬೇಕು, ಹಿಂದೆ ಗುರು ಇರಬೇಕು. ಗುರಿ ಮುಟ್ಟುವವರೆಗೆ ಪ್ರಯತ್ನ ನಿಲ್ಲಬಾರದು ಆಗ ಯಶಸ್ಸು ಸಿಗುತ್ತದೆ ಎಂದರು.

ಸಾನಿಧ್ಯ ವಹಿಸಿ ಮಾತನಾಡಿದ ಸಿದ್ದಯೋಗಿ ಅಮರೇಶ್ವರ ಮಹಾರಾಜರು, ಜೀವನದಲ್ಲಿ ಸೋಮಾರಿತನ ಅಳವಡಿಸಿಕೊಂಡರೆ ಸಾಧನೆ ಸಾಧ್ಯವಾಗುವದಿಲ್ಲ. ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡುವುದು ನಮ್ಮ ಧ್ಯೆಯವಾಗಿದೆ. ಯಾವಾಗಲೂ ಮಕ್ಕಳ ಬಾಳಿಗೆ ಬೆಳಕಾಗುತ್ತೇನೆ. ಮಕ್ಕಳಿಗೆ ಕಠಿಣ ಆಗುವ ಗಣಿತ, ವಿಜ್ಞಾನ ಹಾಗೂ ಇಂಗ್ಲೀಷ ವಿಷಯಗಳ ಕುರಿತು ಪುನರ್ಮನನ ಮಾಡಿಸುತ್ತಾ ಶಿಕ್ಷಕರಿಂದ ಮಕ್ಕಳಿಗೆ ಒಳ್ಳೆಯ ಶಿಕ್ಷಣ ಒದಗಿಸುತ್ತೇವೆ ಎಂದರು.

ಈ ಸಂದರ್ಭದಲ್ಲಿ ಬನಸಿದ್ದ ಮಹಾರಾಜರು, ಎಂ.ಬಿ.ಪಾಟೀಲ ಪೌಂಡೇಶನ್ ಕಾರ್ಯದರ್ಶಿ ಯಾಕುಬ ಜತ್ತಿ, ಸಂಪನ್ಮೂಲ ವ್ಯಕ್ತಿ ಸಿದ್ದಣ್ಣಾ ದಳವಾಯಿ, ಸಾಬು ಮಾಶ್ಯಾಳ, ರಾಜು ಕುರಿ, ಕರೆಪ್ಪ ಬಸ್ತಾಳ, ಮೆಲಗಿರಿ ಹೊಸಮನಿ, ಶ್ರೀಮಂತ ಕೊಟ್ಟಲಗಿ, ಬಸವರಾಜ ಖವಿ, ಮಲ್ಲಿಕಾರ್ಜುನ ಹಂಜಗಿ, ದುಂಡಪ್ಪ ಕುಮಟಗಿ, ಲೇಪು ಕೊಣ್ಣೂರ, ಸುರೇಶ ಕೊಣ್ಣೂರ, ಶ್ರೀಶೈಲ ಬಿರಾದಾರ, ಅಪ್ಪಾಸಾಬ ಮಗದರಿ, ಸಿದರಾಯ ಖವಿ, ಸೋಮನಿಂಗ ಖವಿ, ಸಿದ್ದು ಮುಚ್ಚಂಡಿ, ಸಂಜು ರಾಠೋಡ ಇದ್ದರು.

# ಹಂಪಿ ಉತ್ಸವ ಕವಿಗೋಷ್ಠಿಗೆ ಡಾ.ಹಾದಿಮನಿ ಆಯ್ಕೆ

ಉದಯರಶ್ಮಿ ನ್ಯೂಸ್



ವಿಜಯಪುರ: ಅಂತಾರಾಷ್ಟ್ರೀಯ ಖ್ಯಾತಿಯ ಹಂಪಿ ಉತ್ಸವದ ಕವಿಗೋಷ್ಠಿಯಲ್ಲಿ ಕವನ ವಾಚಿಸಲು ಆಲಮೇಲದ ವೈದ್ಯಸಾಹಿತಿ ಡಾ.ಸಮೀರ ಹಾದಿಮನಿಯವರು ಆಯ್ಕೆಯಾಗಿದ್ದಾರೆ.

ಹಿಂದಿನ ವಿಜಯನಗರ ಸಾಮ್ರಾಜ್ಯದ ಭವ್ಯತೆಯನ್ನು ಮರುಸೃಷ್ಟಿಸುವ ಸಲುವಾಗಿ ರಾಜ್ಯ ಸರ್ಕಾರವು ಹಂಪಿ ಉತ್ಸವವನ್ನು ಆರಂಭಿಸಿದ್ದು, 2024ರ ಹಂಪಿ ಉತ್ಸವವು ಫೆಬ್ರವರಿ 2 ರಿಂದ 4ರವರೆಗೆ ಐತಿಹಾಸಿಕ ಪ್ರವಾಸಿ ತಾಣ ಹಂಪಿಯಲ್ಲಿ ನಡೆಯಲಿದೆ. ಉತ್ಸವದ ಪ್ರಯುಕ್ತ ಕವಿಗೋಷ್ಠಿಯು ವಿರೂಪಾಕ್ಷೇಶ್ವರ ದೇವಸ್ಥಾನದ ವೇದಿಕೆಯಲ್ಲಿ ಜರುಗುವುದು.

ಡಾ.ಸಮೀರ ಹಾದಿಮನಿಯವರು ಈಗಾಗಲೇ ನವರಸಪುರ ಅಂತರಾಷ್ಟ್ರೀಯ ಉತ್ಸವ, ವಿಶ್ವವಿಖ್ಯಾತ ಮೈಸೂರು ದಸರಾ ಉತ್ಸವ ಸೇರಿದಂತೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕನ್ನಡ ಸಾಹಿತ್ಯ ಪರಿಷತ್ತಿನ ಹಲವು ಸಮ್ಮೇಳನಗಳಲ್ಲಿ ಕವನವಾಚನ ಮಾಡಿದ್ದಾರೆ. ಉಪ್ಪು ನೀರಿನ ಸೆಲೆ, ಶ್ಲಾಘನೆ–ಖಂಡನೆ ಸೇರಿದಂತೆ ಐದು ಪುಸ್ತಕಗಳನ್ನು ಪ್ರಕಟಿಸಿದ್ದಾರೆ.

# ಕುಷ್ಠ ರೋಗ ಆನುವಂಶಿಕ ರೋಗವಲ್ಲ :ತೇರದಾಳ




ಉದಯರಶ್ಮಿ ನ್ಯೂಸ್

ಮುದ್ದೇಬಿಹಾಳ: ಕುಷ್ಠ ರೋಗ ಆನುವಂಶಿಕ ರೋಗವಲ್ಲ. ಇದು ಮೈಕ್ರೋಬ್ಯಾಕ್ಟೀರಿಯಂ ಲೆಪ್ರಯಿಂದ ಉಂಟಾಗುವ ರೋಗ ಎಂದು ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಅನುಸೂಯ ತೇರದಾಳ ಹೇಳಿದರು.

ಪಟ್ಟಣದ ಜ್ಞಾನಭಾರತಿ ವಿದ್ಯಾಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಗಳ ಸಂಯಕ್ತ ಆಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ ರಾಷ್ಟ್ರೀಯ ಕುಷ್ಠರೋಗ ನಿರ್ಮೂಲನಾ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಕುಷ್ಠ ರೋಗ ಶಾಪಗ್ರಸ್ತವೂ ಅಲ್ಲ. ಪಾಪದ ಫಲವೂ ಅಲ್ಲ. ಚರ್ಮದ ಮೇಲೆ ತಿಳಿ–ಬಿಳಿ ತಾಮ್ರವರ್ಣದ ಮಚ್ಚೆಗಳಿಗೆ ಸ್ಪರ್ಶ ಜ್ಞಾನವಿರುವುದಿಲ್ಲ. ಈ ರೋಗದ ಲಕ್ಷಣಗಳು ಕಂಡು ಬಂದಾಗ ಗ್ರಾಮದಲ್ಲಿನ ಆರೋಗ್ಯ ಸಿಬ್ಬಂದಿಗಳು ಹಾಗೂ ಆಶಾ ಕಾರ್ಯಕರ್ತೆಯರಿಗೆ ತಿಳಿಸಿ ಮಾರ್ಗದರ್ಶನ ಪಡೆಯಬೇಕು. ಸಧ್ಯ ಸ್ಪರ್ಶ ಕುಷ್ಠರೋಗ ಜಾಗೃತಿ ಅಭಿಯಾನ ಹಮ್ಮಿಕೊಳ್ಳಲಾಗಿದೆ. ಈ ಅಭಿಯಾನವು ಜನೆವರಿ 30 ರಿಂದ ಫೆಬ್ರವರಿ 15ರ ವರೆಗೆ ಜಿಲ್ಲಾದ್ಯಂತ ನಡೆಯಲಿದೆ. ತಾಲೂಕಿನಾದ್ಯಂತ ಶಾಲೆ ಕಾಲೇಜುಗಳಲ್ಲಿ ಅರಿವು ಮೂಡಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತಿದೆ ಎಂದರು.

ನಗರ ಆರೋಗ್ಯ ನಿರೀಕ್ಷಣಾಧಿಕಾರಿ ಎಂ.ಎಸ್.ಗೌಡರ ವಿದ್ಯಾರ್ಥಿಗಳಿಗೆ ಸ್ಪರ್ಶ ಕುಷ್ಠರೋಗ ಜಾಗೃತಿ ಅಭಿಯಾನದ ಭಿತ್ತಿಪತ್ರಗಳನ್ನು ವಿತರಿಸಿ ಪ್ರತಿಜ್ಞಾ ವಿಧಿಯನ್ನು ಬೋಧಿಸಿದರು.

ಕಾರ್ಯಕ್ರಮದಲ್ಲಿ ತಾಲೂಕ ಆರೋಗ್ಯ ಅಧಿಕಾರಿಗಳ ಕಾರ್ಯಾಲಯದ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಎಂ.ಎಸ್.ಮನಹಳ್ಳಿ, ಶಾಲೆಯ ಮುಖ್ಯ ಗುರು ರಾಮಚಂದ್ರ ಹೆಗಡೆ, ಶಿಕ್ಷಕ ಬಿ.ಟಿ.ಭಜಂತ್ರಿ, ತೇಜಸ್ವಿನಿ ಕಾಟಿ, ಶಾಂತಾ ಭಟ್, ಲೀಲಾ ಭಟ್, ಜಿ.ಜಿ.ಪಾದಗಟ್ಟಿ ಸೇರಿದಂತೆ ವಿದ್ಯಾರ್ಥಿಗಳು ಆಶಾ ಕಾರ್ಯಕರ್ತೆಯರು ಇದ್ದರು.

ಮಹಾನಗರ ಪಾಲಿಕೆ ಸಾಮಾನ್ಯ ಸಭೆ | ಉಸ್ತವಾರಿ ಸಚಿವ ಡಾ.ಎಂ.ಬಿ.ಪಾಟೀಲ ಖಡಕ್ ಸೂಚನೆ

# ಕುಡಿವ ನೀರಿನ ಸಮಸ್ಯೆಯಾಗದಂತೆ ಅಗತ್ಯ ಕ್ರಮ ಕೈಗೊಳ್ಳಿ

ಉದಯರಶ್ಮಿ ನ್ಯೂಸ್



ವಿಜಯಪುರ: ನಗರದ ಸಾರ್ವಜನಿಕರಿಗೆ ಕುಡಿಯುವ ನೀರಿನ ಸಮಸ್ಯೆಯಾಗದಂತೆ ಅಧಿಕಾರಿಗಳು ತತಕ್ಷಣ ಕಾರ್ಯ ಕೈಗೊಳ್ಳಬೇಕು ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಖಾತೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ ಪಾಟೀಲ ಕಟ್ಟುನಿಟ್ಟಾಗಿ ಹೇಳಿದರು.

ಸೋಮವಾರ ನಗರದ ಮಹಾನಗರ ಪಾಲಿಕೆ ಸಾಮಾನ್ಯ ಸಭೆಯಲ್ಲಿ ಮಾತನಾಡಿದ ಅವರು, ನಗರಕ್ಕೆ 84 ಎಂ.ಎಲ್.ಡಿ ನೀರು ಅವಶ್ಯಕತೆ ಇದ್ದು, ಸದ್ಯ ನಮಗೆ 50 ಎಂ.ಎಲ್.ಡಿ ನೀರು ಲಭ್ಯವಾಗುತ್ತಿದೆ. ಆದ್ದರಿಂದ ನೀರಿನ ಸಮಸ್ಯೆ ಉಂಟಾಗದಂತೆ ಅಗತ್ಯ ಕ್ರಮ ಕೈಗೊಳ್ಳುವಂತೆ ಅವರು ಖಡಕ್ ಸೂಚನೆ ನೀಡಿದರು.

ನಗರದಲ್ಲಿರುವ ಹಲವಾರು ಐತಿಹಾಸಿಕ ಭಾವಿಗಳನ್ನು ಈಗಾಗಲೇ ಸ್ವಚ್ಚಗೊಳಿಸಲು ಕ್ರಮವಹಿಸಿದ್ದು, ಈ ಬಾವಿಗಳಲ್ಲಿರುವ ನೀರನ್ನು ಇತರ ಗೃಹೋಪಯೋಗಿ ಉಪಯೋಗಗಳಿಗೆ ಬಳಕೆ ಮಾಡಿದಲ್ಲಿ ಕುಡಿಯುವ ನೀರಿನ ಒತ್ತಡ ತಗ್ಗಿಸಬಹುದಾಗಿದೆ. ನಗರದ ವಿವಿಧ ಬಡಾವಣೆಗಳಲ್ಲಿ ಕೊಳವೆ ಬಾವಿಗಳನ್ನು ಕೊರೆಯಿಸಿದ್ದು, ಈಗಾಗಲೇ ಕೊರೆಯಿಸಿದ ಬೋರ್‌ವೆಲ್‌ಗಳಿಗೆ ಶೀಘ್ರವಾಗಿ ಮೋಟಾರ್‌ನ್ನು ಅಳವಡಿಸಿ ನೀರನ್ನು ಬಳಸುವಂತೆ ಸೂಚಿಸಿದರು.

ಮಹಾನಗರ ಪಾಲಿಕೆ ಸದಸ್ಯರುಗಳು ತಮ್ಮ ತಮ್ಮ ವಾರ್ಡುಗಳಲ್ಲಿರುವ ಕೊಳವೆ ಬಾವಿಗಳನ್ನು ಗುರುತಿಸಿ ಸಣ್ಣ ಪುಟ್ಟ ದುರಸ್ತಿಗಳಿದ್ದಲ್ಲಿ ದುರಸ್ತಿಗೊಳಿಸಿ ಉಪಯೋಗಿಸಲು ಕ್ರಮ ವಹಿಸಬೇಕು. ಖಾಸಗಿ ಕೊಳವೆ ಬಾವಿಗಳನ್ನು ಗುರುತಿಸಿ ಬೊರವೆಲ್ ಮಾಲೀಕರನ್ನು ಮನವೊಲಿಸಿ ನೀರಿಗಾಗಿ ಬಳಸಿಕೊಳ್ಳಬೇಕು. ಅತೀ ಅವಶ್ಯಕತೆ ಇದ್ದಲ್ಲಿ ನೀರಿನ ಟ್ಯಾಂಕರ್‌ಗಳನ್ನು ಬಳಸಿಕೊಳ್ಳಬೇಕು. ಒಟ್ಟಾರೆ ನಗರದ ಜನತೆಗೆ ನೀರಿನ ಕೊರತೆಯಾಗದಂತೆ ತುರ್ತು ಕ್ರಮಗಳನ್ನು ತೆಗೆದುಕೊಳ್ಳಲು ತಕ್ಷಣದಿಂದಲೇ ಕಾರ್ಯಪ್ರವೃತ್ತರಾಗುವಂತೆ ಅಧಿಕಾರಿಗಳಿಗಳಿಗೆ ತಿಳಿಸಿದರು.

ಮುಂದಿನವಾರ ಮತ್ತೊಮ್ಮೆ ನಗರದ ಕುಡಿಯುವ ನೀರಿನ ಸಮಸ್ಯೆಗಳ ಕುರಿತು ಸಭೆ ನಡೆಸುವೆ. ಒಂದು ವೇಳೆ ಕುಡಿವ ನೀರಿನ ಸಮಸ್ಯೆಗಳು ಕಂಡು ಬಂದಲ್ಲಿ ಅಧಿಕಾರಿಗಳನ್ನೆ ನೇರವಾಗಿ ಹೊಣೆಗಾರರನ್ನಾಗಿ ಮಾಡಲಾಗುವುದು. ಈ ಕುರಿತು ಪಾಲಿಕೆ ಆಯುಕ್ತರು, ಜಿಲ್ಲಾಧಿಕಾರಿಗಳು, ಉಪವಿಭಾಗಾಧಿಕಾರಿಗಳು ಹಾಗೂ ಪಾಲಿಕೆ ಸದಸ್ಯರುಗಳು ಕೂಡಿ ಸಭೆಯನ್ನು ಕರೆದು ನಗರಾದ್ಯಾಂತ ಕುಡಿಯುವ ನೀರಿಗಾಗಿ ತುರ್ತು ಕ್ರಮಕ್ಕೆ ಅವಶ್ಯವಿರುವ ಅನುದಾನ ಬಳಕೆಗೆ ಅವಕಾಶ ಕಲ್ಪಿಸಿಕೊಂಡು ಕುಡಿಯುವ ನೀರಿನ ಸಮಸ್ಯೆಯಾಗದಂತೆ ಅಗತ್ಯ ಕ್ರಮ ವಹಿಸುವಂತೆ ಅವರು ಸೂಚನೆ ನೀಡಿದರು.

ಸಭೆಯ ಅಧ್ಯಕ್ಷತೆ ವಹಿಸಿದ್ದ ಮಹಾಪೌರರಾದ ಶ್ರೀಮತಿ ಮಹೇಜಬಿನ್ ಹೊರ್ತಿ ಅವರು ಮಾತನಾಡಿ, ನಗರದ ಅಭಿವೃದ್ಧಿಗೆ ಸಹಕಾರ ಕೋರಿದರು.

ನಗರದಲ್ಲಿ ಕೆಲವು ಬಡಾವಣೆಗಳಲ್ಲಿ ದಿನದ 24 ಗಂಟೆ ನೀರು ಸರಬರಾಜು ಆಗುತ್ತಿದ್ದು ಹೆಚ್ಚಿನ ನೀರನ್ನು ಪೋಲು ಮಾಡಲಾಗುತ್ತಿದೆ ಅದನ್ನು ತಡೆಗಟ್ಟಬೇಕು. ಕಲುಷಿತ ನೀರು ಪೂರೈಕೆಯಾಗದಂತೆ ನೋಡಿಕೊಳ್ಳಬೇಕು. ಬೂತನಾಳ ಕೆರೆಯಿಂದ ನಗರದ 07 ವಾರ್ಡುಗಳಿಗೆ ಕುಡಿಯುವ ನೀರು ಸರಬರಾಜಾಗುತ್ತಿದ್ದು, ಮುಂಬರುವ ಬೇಸಿಗೆಯಲ್ಲಿ ಸಮರ್ಪಕವಾಗಿ ನೀರು ಪೂರೈಕೆಯಾಗುವಂತೆ ಕ್ರಮ ವಹಿಸಲು ಸದಸ್ಯರು ಕೋರಿದರು.

ಸಭೆಯಲ್ಲಿ ನಾಗಠಾಣ ಕ್ಷೇತ್ರದ ಶಾಸಕ ವಿಠ್ಠಲ ಕಟಕದೊಂಡ, ಮಹಾನಗರ ಪಾಲಿಕೆ ಆಯುಕ್ತ ಬದ್ರುದ್ದಿನ ಸೌದಾಗರ, ಉಪ ಆಯುಕ್ತ ಮಹಾವೀರ ಬೋರಣ್ಣವರ, ಪಾಲಿಕೆ ಸದಸ್ಯರು ವಿವಿಧ ಇಲಾಖೆಯ ಅಧಿಕಾರಿಗಳು, ಪಾಲಿಕೆ ಸಿಬ್ಬಂದಿ ಹಾಗೂ ಇತರರು ಉಪಸ್ಥಿತ–ರಿದ್ದರು.

ವಿಜಯಪುರ ಮಹಾನಗರ ಪಾಲಿಕೆ ಉಪ ಮಹಾಪೌರ ದಿನೇಶ ಹಳ್ಳಿ ಮಾತನಾಡಿ, ನಗರದ ಮೂಲಭೂತ ಸೌಕರ್ಯಕ್ಕೆ ಹೆಚ್ಚಿನ ಗಮನ ನೀಡೋಣ. ನಗರವನ್ನು ಸ್ವಚ್ಛ ಹಾಗೂ ಸುಂದರ ನಗರವನ್ನಾಗಿ ಅಭಿವೃದ್ಧಿ ಪಡಿಸೋಣ ಈ ನಿಟ್ಟಿನಲ್ಲಿ ಅಧಿಕಾರಿಗಳು, ಪಾಲಿಕೆ ಸದಸ್ಯರು ಕೈ ಜೋಡಿಸಬೇಕು ಎಂದು ಹೇಳಿದರಲ್ಲದೆ ತಮ್ಮ ಆಯ್ಕೆಗೆ ಸಹಕರಿಸಿದ ಸದಸ್ಯರಿಗೆ ಧನ್ಯವಾದ ತಿಳಿಸಿದರು.



# ತಮ್ಮ ಹೋರಾಟಕ್ಕೆ ಸಾಂಸ್ಥಿಕ ರೂಪ ಕೊಟ್ಟ ಗಾಂಧೀಜಿ :ಹೆಗಡೆ

ಉದಯರಶ್ಮಿ ನ್ಯೂಸ್



ಮುದ್ದೇಬಿಹಾಳ: ಸಾಕಷ್ಟು ಜನರ ತ್ಯಾಗ ಬಲಿದಾನದಿಂದ ಭಾರತ ಸ್ವತಂತ್ರವಾಗಿದೆ. ಅದನ್ನು ಉಳಿಸಿಕೊಳ್ಳಬೇಕಾದಲ್ಲಿ ನಾವು ಸದಾ ಜಾಗ್ರತರಾಗಿರಬೇಕು ಎಂದು ಜ್ಞಾನಭಾರತಿ ಪ್ರೌಢ ಶಾಲೆಯ ಮುಖ್ಯಗುರು ರಾಮಚಂದ್ರ ಹೆಗಡೆ ಹೇಳಿದರು.

ಪಟ್ಟಣದ ಜ್ಞಾನ ಭಾರತಿ ವಿದ್ಯಾ ಮಂದಿರ ಸಮೂಹ ಶಿಕ್ಷಣ ಸಂಸ್ಥೆಯಲ್ಲಿ ಹುತಾತ್ಮರ ದಿನಾಚರಣೆ ಅಂಗವಾಗಿ ಆಯೋಜಿಸಲಾಗಿದ್ದ ಕಾರ್ಯರ್ಯಕ್ರಮದಲ್ಲಿವರು ಮಾತನಾಡಿದರು.

ಭಾರತದ ಸ್ವಾತಂತ್ರ್ಯದ ಹೋರಾಟದ ಇತಿಹಾಸವನ್ನು ಯುವ ಪೀಳಿಗೆಗೆ ತಿಳಿಸಿಕೊಡಬೇಕು. 1857ರ ಪ್ರಥಮ ಸ್ವಾತಂತ್ರ್ಯ ಸಂಗ್ರಾಮದಿಂದ ಹಿಡಿದು ಸ್ವಾತಂತ್ರ್ಯ ಬಿಬರುವವರೆಗಿನ ಅವಧಿಯಲ್ಲಿ ಸಾಕಷ್ಟು ಜನ ದೇಶ ಭಕ್ತರು ಸ್ವಾತಂತ್ರ್ಯಕ್ಕಾಗಿ ಪ್ರಾಣಾರ್ಪಣೆ ಮಾಡಿದ್ದಾರೆ. ಅದರಲ್ಲಿಯೂ ಮಹಾತ್ಮ ಗಾಂಧೀಜಿಯವರು 1916ರಿಂದ ತಮ್ಮ ಹೋರಾಟಕ್ಕೆ ಒಂದು ಸಾಂಸ್ಥಿಕ ರೂಪವನ್ನು ಕೊಟ್ಟರು. ಪರೋಕ್ಷ ಪ್ರತಿರೋಧ, ಅಹಿಂಸೆ ಮತ್ತು ಸತ್ಯಾಗ್ರಹ ಎನ್ನುವ ಮೂರು ಅಸ್ತ್ರಗಳು ಬಹಳ ಪ್ರಮುಖವಾದವುಗಳಾಗಿವೆ. ಇವು ಅಶಕ್ತರ ಅಸ್ತ್ರವಲ್ಲ. ಸಾಧಿಸುತ್ತೇನೆಂಬ ಗುರಿ ಮತ್ತು ಛಲವುಳ್ಳವರ ಅಸ್ತ್ರಗಳಾಗಿವೆ. ಭಾರತ ಕೇವಲ ವಿಶ್ವಗುರುವಾದರೆ ಸಾಲದು, ವಿಶ್ವಶಕ್ತಿ, ವಿಶ್ವಗುರು, ಜಗನ್ಮಾತೆಯಾಗಿ ಹೊರಬರಬೇಕಾಗಿದೆ. ಅದನ್ನು ಸಾಧಿಸುವ ಸಂಕಲ್ಪ ಮತ್ತು ಅನುಷ್ಠಾನವೆರಡು ನಮ್ಮಿಂದಲೇ ಆಗಿಬೇಕಾಗಿದೆ. ಅದುವೆ ಹುತಾತ್ಮರಿಗೆ ನಾವು ಕೊಡುವ ಗೌರವವಾಗಿದೆ ಎಂದರು.

ಈ ವೇಳೆ ನಿರ್ದೇಶಕರುಗಳಾದ ಲೀಲಾ ಭಟ್ಟ, ಶಾಂತಾ ಭಟ್ಟ, ಆಂಗ್ಲ ಮಾಧ್ಯಮ ಮುಖ್ಯಗುರುಮಾತೆ ರಂಜಿತಾ ಹೆಗಡೆ, ಶಿಕ್ಷಕರಾದ ಸುಖದೇವ ಹಂಜಗಿ, ಬಿ.ಟಿ.ಭಜಂತ್ರಿ, ಕಿರಣ ಕಡಿ, ಮಂಜುನಾಥ ಪಡದಾಳಿ, ಬಸವರಾಜ ಸೋನಾರ್, ತೇಜಸ್ವಿನಿ ಕಾಟಿ, ಇಂದು ನಾಯಕ, ಗುರುಬಾಯಿ ತಂಗಡಗಿ, ಶಾಹಿನಾ ನಾಲತಾವಾಡ, ಲಕ್ಷ್ಮೀ ಗೌಡರ್, ರೂಪಾ ನಾಟಿ–ಕರ್, ಸರಸ್ವತಿ ಮಡಿವಾಳರ್, ಭಾಗ್ಯ ಸಿದ್ದಾಪೂರ, ಪವಿತ್ರಾ ಸಜ್ಜನ, ಮಂಜುಳಾ ದಶರಥ, ಗೀತಾ ಇಲ್ಲೂರ, ಸುಮಾ ಬಳಗಾನೂರ, ರಮೇಶ ಮಡಿವಾಳರ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಅಕ್ರಮ ಕಟ್ಟಡ ನಿರ್ಮಾಣ ತಡೆಗೆ ಆಗ್ರಹಿಸಿ ಮನವಿ



ಉದಯರಶ್ಮಿ ನ್ಯೂಸ್

ಮುದ್ದೇಬಿಹಾಳ: ಪಟ್ಟಣದ ವಿದ್ಯಾನಗರದ ಸಿಟಿಎಸ್ ನಂ 2142/3 ಮತ್ತು 2142/4 ಜಾಗೆಯಲ್ಲಿ ಕಾನೂನು ಬಾಹಿರವಾಗಿ ಕಟ್ಟಡವನ್ನು ನಿರ್ಮಿಸುತ್ತಿದ್ದು ಅದನ್ನು ತಡೆಹಿಡಿಯುವಂತೆ ಆಗ್ರಹಿಸಿ ವಿವಾದಿತ ಜಾಗೆಯ ಬಳಿಯ ನಿವಾಸಿಗಳು ಪುರಸಭೆ ಮುಖ್ಯಾಧಿಕಾರಿ ಮಲ್ಲನಗೌಡ ಬಿರಾದಾರ ಗೆ ಮನವಿ ಪತ್ರ ಸಲ್ಲಿಸಿದರು.

ವಿವಾದಿತ ಕಟ್ಟಡ ನಿರ್ಮಿಸುತ್ತಿರುವ ಪ್ಲಾಟ್‌ಗಳು ಗೃಹ ಬಳಕೆಗಾಗಿ ಅಂತಾ ಆದೇಶವಾಗಿವೆ. ಆದರೆ ಸದರಿ ಪ್ಲಾಟ್‌ಗಳಲ್ಲಿ ಶಾಲಾ ಕಟ್ಟಡವನ್ನು ನಿರ್ಮಿಸಲಾಗುತ್ತಿದೆ. ಅಲದೇ ಇಲ್ಲಿ ಸಾರ್ವಜನಿಕ ರಸ್ತೆಗಳನ್ನೂ ಸಹ ಅತಿಕ್ರಮಣ ಮಾಡಲಾಗದೆ. ಇಲ್ಲಿ ಶಾಲೆ ನಿರ್ಮಿಸಲು ಪುರಸಭೆಯಿಂದ ಯಾವುದೇ ಕಟ್ಟಡ ಪರವಾನಿಗೆ ಕೂಡ ಪಡೆದಿಲ್ಲ. ಕಾರಣ ಈ ಕೂಡಲೇ ಅನಧಿಕೃತವಾಗಿ ನಿರ್ಮಿಸುತ್ತಿರುವ ಈ ಶಾಲಾ ಕಟ್ಟಡವನ್ನು ಬಂದ ಮಾಡಬೇಕು. ಮತ್ತು ಯಾವುದೇ ತರಹದ ಕಟ್ಟಡ ಪರವಾನಿಗೆ ನೀಡಬಾರದು, ತಪ್ಪಿದ್ದಲ್ಲಿ ತಮ್ಮ ಕಾರ್ಯಾಲಯದ ಎದುರು ಬಡಾವಣೆಯ ಸಾರ್ವಜನಿಕರು ಉಗ್ರ ಪ್ರತಿಭಟನೆ ನಡೆಸುವದಾಗಿ ಮನವಿಯಲ್ಲಿ ತಿಳಿಸಲಾಗಿದೆ.

ವಾಯ್.ಎಸ್.ನಾಗರದಿನ್ನಿ, ಗೌರಮ್ಮ ಹುನಗುಂದ, ಶೃತಿ ಮದರಖಂಡಿ, ಚನ್ನಬಸಪ್ಪ ಗೌಡರ, ಕೆ.ಜಿ.ಬಡಿಗೇರ, ಎನ್.ಬಿ.ಸಜ್ಜನ, ಎ.ಬಿ.ಮಾಳಜಿ, ಎನ್.ಜಿ.ಕುಲಕರ್ಣಿ, ಎಸ್.ಎಸ್.ಕುಂಬಾರ, ಎನ್.ಆರ್.ದೊಡಮನಿ, ಎಸ್.ಡಿ.ರಾಠೋಡ ಸೇರಿದಂತೆ 22 ಜನ ಮನವಿ ಪತ್ರಕ್ಕೆ ಸಹಿ ಹಾಕಿದ್ದಾರೆ.

# ಶೋಷಿತರ ಬದುಕು ಹಸನಾಗಿಸಲು ಶ್ರಮಿಸಿದ ಅಂಬೇಡ್ಕರ್

ಉದಯರಶ್ಮಿ ನ್ಯೂಸ್




ವಿಜಯಪುರ: ಅಂಬೇಡ್ಕರ್ ಜೀವನ ಸಾಧನೆ ಸಂದೇಶಗಳನ್ನು ಪ್ರತಿಯೊಬ್ಬರಿಗೂ ಅರಿಯಬೇಕಾಗಿದೆ ಆ ನಿಟ್ಟಿನಲ್ಲಿ ಪ್ರತಿಯೊಂದು ಗ್ರಾಮಕ್ಕೂ ಸಂವಿಧಾನ ಜಾಗೃತಿ ಜಾಥ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಈ ಕಾರ್ಯಕ್ರಮದ ಮೂಲಕ ನಮ್ಮ ಭಾರತ ದೇಶದ ಸಂವಿಧಾನದ ಹಿರಿಮೆಯನ್ನು ಪ್ರತಿ ನಾಗರಿಕರು ತಿಳಿದುಕೊಳ್ಳಲು ಇದೊಂದು ಸದಾವಕಾಶವಾಗಿದೆ ಎಂದು ವಿಜಯಪುರ ಸಮಾಜ ಕಲ್ಯಾಣ ನಿರ್ದೇಶಕ ಪುಂಡಲೀಕ ಮಾನವರ ಹೇಳಿದರು.

ಮಂಗಳವಾರ ವಿಜಯಪುರ ಬೆಂಗಳೂರು ಬೈಪಾಸ್ ಬಳಿ ಬೈಕ್ ಜಾಥ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಅಂಬೇಡ್ಕರ್ರು ಶೋಷಿತರು ದಲಿತರು ದೀನರ ಬದುಕು ಹಸನಾಗಿಸಲು ಶ್ರಮಿಸಿದ ಮಹಾನುಭಾವರು ಎಂದು ಹೇಳಿದರು.

ಬೆಂಗಳೂರು ಬೈಪಾಸಿನಿಂದ ಹೊರಟ ಬೈಕ್ ಜಾಥ ಸಂವಿಧಾನದ ಆಸೆ–ಆಶಯಗಳ ಘೋಷಣೆ ಮೂಲಕ ಹಿಟ್ನಳ್ಳಿ ಗ್ರಾಮಕ್ಕೆ ತಲುಪಿತು. ಗ್ರಾಮ ಪಂಚಾಯತಿ ಅಧ್ಯಕ್ಷ ರವಿಕುಮಾರ್ ಕಡಿಮನಿ ಮತ್ತು ಸದಸ್ಯರು, ಊರಿನ ಗಣ್ಯರು ಜಾಥವನ್ನು ಅದ್ದೂರಿಯಾಗಿ ಸ್ವಾಗತಿಸಿದರು.

ಹಿಟ್ನಹಳ್ಳಿ ಗ್ರಾಮ ಪಂಚಾಯಿತಿ ಸಭಾಂಗಣದಲ್ಲಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಸಮಾಜ ಕಲ್ಯಾಣ ಉಪ ನಿರ್ದೇಶಕ ಎಸ್ ಎಂ ಪಾಟೀಲ್ ಅವರು, ಅಂಬೇಡ್ಕರ್ ಅವರ ಹಚ್ಚಿದ ದೀಪ ಮನೆ ಮನಗಳಿಗೆ ತಲುಪಬೇಕು. ಆ ನಿಟ್ಟಿನಲ್ಲಿ ನಾವೆಲ್ಲರೂ ಶ್ರಮವಹಿಸಬೇಕು ಎಂದರು.

ಬಳಿಕ ಸಂವಿಧಾನ ಜಾಗೃತಿ ಜಾಥ ಕಾರ್ಯಕ್ರಮ ತೊರವಿ ಗ್ರಾಮಕ್ಕೆ ತಲುಪಿ ಅಲ್ಲಿ ಸಂವಿಧಾನದ ಸವಿಸ್ತಾರವಾದಂತ ಸಂದೇಶಗಳನ್ನು ನೆರೆದ ಸಾರ್ವಜನಿಕ–ರಿಗೆ ಹೇಳಲಾಯಿತು.

# ದೇಶದ ಬೆನ್ನೆಲುಬಾಗಿರುವ ರೈತರನ್ನು ಸ್ಮರಿಸಿ :ಸಂಗನಬಸವ ಶ್ರೀ

ಉದಯರಶ್ಮಿ ನ್ಯೂಸ್



ಬಸವನಬಾಗೇವಾಡಿ: ತಾಲೂಕಿನ ಮನಗೂಳಿ ಪಟ್ಟಣದ ಸಂಸ್ಥಾನ ಹಿರೇಮಠದಲ್ಲಿ ಹಮ್ಮಿಕೊಂಡಿರುವ ಕಲಬುರಗಿ ಶರಣಬಸವೇಶ್ವರ ಪುರಾಣದಲ್ಲಿ ಸೋಮವಾರ ಸಂಜೆ ಹಂತಿ ಹೊಡೆಯವ ಕಾರ್ಯಕ್ರಮ ಹಮ್ಮಿಕೊಳ್ಳುವ ಮೂಲಕ ಇಂದಿನ ಯುವಜನಾಂಗಕ್ಕೆ ಹಂತಿ ಹೊಡೆಯುವದನ್ನು ಮಾದರಿಯಾಗಿ ತೋರಿಸಿದ್ದು ಗಮನ ಸೆಳೆಯಿತು.

ಈ ಸಂದರ್ಭದಲ್ಲಿ ಹಿರೇಮಠದ ಅಭಿನವ ಸಂಗನಬಸವ ಶಿವಾಚಾರ್ಯ ಸ್ವಾಮೀಜಿ ಮಾತನಾಡಿ, ನಮ್ಮ ಭಾರತೀಯ ಪರಂಪರೆ ಜಗತ್ತಿಗೆ ಮಾದರಿಯಾಗಿದೆ. ಇಡೀ ಜಗತ್ತಿಗೆ ಅನ್ನ ನೀಡುವ, ದೇಶದ ಬೆನ್ನೆಲುಬಾಗಿರುವ ರೈತ ಬಾಂಧವರನ್ನು ಪ್ರತಿಯೊಬ್ಬರೂ ಮರೆಯದೇ ಸ್ಮ–ರಿಸಬೇಕು. ಇಂದು ಗೋವುಗಳನ್ನು, ಎತ್ತುಗಳನ್ನು ಸಾಕುವವರ ಸಂಖ್ಯೆ ಕಡಿಮೆಯಾಗುತ್ತಿರುವುದು ವಿಷಾದಕರ ಸಂಗತಿ. ಯಾವ ಮನೆಯಲ್ಲಿ ಗೋವುಗಳು, ಎತ್ತುಗಳು ಇರುತ್ತವೆ ಆ ಮನೆ ಸುಂದರವಾಗಿ ಕಾಣುತ್ತದೆ. ಇಂದಿನ ಯುವಜನಾಂಗಕ್ಕೆ ಹಂತಿ ಪದ, ಹಂತಿ ಹೊಡೆಯುವದು ಎಂಬುವದು ಗೊತ್ತಿಲ್ಲ. ಯುವಜನಾಂಗ ಕೃಷಿಗೆ ಸಂಬಂಧಿಸಿದ ಚಟುವಟಿ–ಕೆಗಳನ್ನು ಅರಿತುಕೊಳ್ಳಬೇಕೆಂದರು.

ಈ ಸಂದರ್ಭದಲ್ಲಿ ಚಂದ್ರಶೇಖರಗೌಡ ಪಾಟೀಲ, ಮಹಾಂತಪ್ಪಗೌಡ ಗುಜಗೊಂಡ, ನಿಂಗನಗೌಡ ಪಾಟೀಲ, ರೇವಣಸಿದ್ದಪ್ಪ ತಪಶೆಟ್ಟಿ, ಬಸು ಹಿಟ್ನಳ್ಳಿ, ರಮೇಶ ಔರಸಂಗ, ಮುದುಕಪ್ಪ ಮಣ್ಣೂರ, ಬಾಬು ಘೋರ್ಪಡೆ, ಬಾಬು ಹುಲಗಬಾಳ, ರಾಮು ಬಿರಾದಾರ, ಮಲ್ಲಿಕಾರ್ಜುನ ಕಬ್ಬಿನ ಇತರರು ಇದ್ದರು.

# ರೈತ ಸಂಘ ಬಲವರ್ಧನೆಗೆ ಸಂಘಟನೆ ಅವಶ್ಯ :ಕುಬಕಡ್ಡಿ

ಉದಯರಶ್ಮಿ ನ್ಯೂಸ್



ವಿಜಯಪುರ: ಕೃಷ್ಣಾನದಿ ಮತ್ತು ಆಲಿಮಟ್ಟಿ ಜಲಾಶಯಕ್ಕೆ ಸಂಬಂಧಿಸಿದಂತೆ ಜಲಾಶಯದ ಎತ್ತರ, ನಷ್ಟಗೊಂಡ ರೈತರಿಗೆ ಪರಿಹಾರ, ಪುರ್ನವಸತಿ, ಬೆಳೆ ಪರಿಹಾರ, ಬರಗಾಲ ಪರಿಹಾರ, ಸೇರಿದಂತೆ ಹಲವಾರು ರೈತರ ಜ್ವಲಂತ ಸಮಸ್ಯೆಗಳ ಕುರಿತು ಚರ್ಚಿಸಲು ಇಂದು ನಾವೆಲ್ಲರೂ ಸೇರಿದ್ದೇವೆ ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ರಾಜ್ಯ ಪ್ರಧಾನ ಕಾರ್ಯದರ್ಶಿಗಳಾದ ರಾಹುಲ ಕುಬಕಡ್ಡಿಯವರು ಸಭೆಯನ್ನು ಉದ್ದೇಶಿಸಿ ಮಾತನಾಡಿದರು.

2024 ನೇ ಸಾಲಿನ ಸಮಗ್ರ ಹೋರಾಟ ಹಾಗೂ ವರ್ಷವಿಡಿ ಹೋರಾಟದ ರೂಪರೇಷಗಳನ್ನು ಸಿದ್ದಪಡಿಸಲು ನಗರದ ಪ್ರವಾಸಿ ಮಂದಿರದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ವರ್ಷವಿಡಿ ಕಾರ್ಯಕ್ರಮದ ಹೋರಾಟದ ಪೂರ್ವಭಾವಿ ಸಭೆಯಲ್ಲಿ ಈ ಜಿಲ್ಲೆಯಲ್ಲಿ ರೈತ ಸಂಘ ಬಲಿಷ್ಠಗೊಳ್ಳಬೇಕಾದರೆ ವರ್ಷವಿಡಿ ಸಂಘಟನೆ ಹಾಗೂ ಹೋರಾಟ ಹಾಗೂ ತರಬೇತಿ ಅವಶ್ಯಕ ಎಂದು ಹೇಳಿದರು.

ಈ ವೇಳೆ ಜಿಲ್ಲಾಧ್ಯಕ್ಷರಾದ ಸಂಗಮೇಶ ಸಗರ ಮಾತನಾಡುತ್ತಾ ಆಲಿಮಟ್ಟಿ ಜಲಾಶಯ ಎತ್ತರಗೊಂಡರೆ ಮಾತ್ರ ವಿಜಯಪುರ ಜಿಲ್ಲೆಯ ಕಟ್ಟಕಡೆಯ ಹಳ್ಳಿಯ ಕೊನೆಯ ರೈತನಿಗೂ ನೀರು ಸಿಗುತ್ತದೆ, ಆ ನೀರು ಸಿಗಬೇಕಾದರೆ ಜಿಲ್ಲೆಯ 13 ತಾಲೂಕು ಹಾಗೂ ಅದರಲ್ಲಿನ ಎಲ್ಲಾ ಹಳ್ಳಿಗಳಲ್ಲಿ ಸಂಘಟನೆ ಮಾಡುತ್ತಾ ರಾಜ್ಯ ಹಾಗೂ ಕೇಂದ್ರ ಸರಕಾರದ ವಿರುದ್ಧ ಧ್ವನಿ ಎತ್ತಬೇಕು ಆಗ ಮಾತ್ರ ಇದು ಸಾಧ್ಯವಾಗುವುದು. ಅದೇರೀತಿ ಯುವ, ಮಹಿಳಾ ಹಾಗೂ ಕಾರ್ಮಿಕ ಸಂಘಟನೆಯನ್ನು ಮಾಡಬೇಕು ಎಂದರು.

ಈ ವೇಳೆ ಮಹಿಳಾ ಅಧ್ಯಕ್ಷರಾದ ರೇಖಾ ಪಾಟೀಲ, ತಾಲೂಕಾ ಅಧ್ಯಕ್ಷರುಗಳಾದ ಈರಪ್ಪ ಕುಳೆಕುಮಟಗಿ, ಸಾತಲಿಂಗಯ್ಯ ಸಾಲಿಮಠ, ಮಹಾದೇವ ಬನಸೋಡೆ, ಶ್ರೀಶೈಲ ವಾಲಿಕಾರ, ಸೇರಿದಂತೆ ಶಿವಾನಂದಯ್ಯ ಹಿರೇಮಠ, ಸುಭಾಸ ಸಜ್ಜನ, ನಜೀರ ನಂದರಗಿ, ಶಾನೂರ ನಂದರಗಿ , ರಾಮನಗೌಡ ಪಾಟೀಲ, ಮಹಾದೇವ ತೇಲಿ, ಅರುಣಗೌಡ ತೇರದಾಳ, ಸಂಗಪ್ಪ ಟಕ್ಕೆ, ಸಂಪತ್ತ ಜಮಾದಾರ, ಸಂಗಮೇಶ ಹುಣಸಗಿ, ಹಣಮಂತ ಬ್ಯಾಡಗಿ, ಹೆಚ್.ಎನ್.ಪಾಟೀಲ, ಮಹಾದೇವ ಕದಂ, ಸೇರಿದಂತೆ ಅನೇಕರು ಇದ್ದರು.

# ವಿಜಯಪುರ: ಕಾಂಗ್ರೆಸ್ ಕಛೇರಿಯಲ್ಲಿ ಹುತಾತ್ಮರ ದಿನ

ಉದಯರಶ್ಮಿ ನ್ಯೂಸ್



ವಿಜಯಪುರ: ರಾಷ್ಟ್ರಪಿತ ಮಹಾತ್ಮಾ ಗಾಂಧಿಯವರ 76ನೇ ಪುಣ್ಯತಿಥಿಯ ಅಂಗವಾಗಿ ವಿಜಯಪುರ ಜಿಲ್ಲಾ ಕಾಂಗ್ರೆಸ್ ಕಛೇರಿಯಲ್ಲಿ ಹುತಾತ್ಮರ ದಿನವನ್ನು ಆಚರಿಸಲಾಯಿತು.

ಈ ಸಂದರ್ಭದಲ್ಲಿ ಗಾಂಧಿಜಿಯವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಮಾತನಾಡಿದ ಜಿಲ್ಲಾ ಕಾಂಗ್ರೆಸ್ ಉಪಾಧ್ಯಕ್ಷರಾದ ವೈಜನಾಥ ಕರ್ಪೂರಮಠ, ಅಹಿಂಸಾಮೂರ್ತಿ, ಸರಳತೆಯ ಪ್ರತಿಪಾದಕ, ಜಗತ್ತಿನ ಹಲವಾರು ಮಹಾನ್ ಚಳುವಳಿಗಳಿಗೆ ಪ್ರೇರಕರಾಗಿದ್ದ ಮಹಾತ್ಮಾ ಗಾಂಧಿಯವರ ಕೊಡುಗೆಗಳನ್ನು ಯಾರೂ ಮರೆಯುವಂತಿಲ್ಲ. ಸತ್ಯ, ಶಾಂತಿ, ಅಹಿಂಸೆ, ಅಸ್ಪೃಶ್ಯತೆ ನಿವಾರಣೆಗಾಗಿ ಗಾಂಧಿಜಿಯವರು ಪಾಲಿಸಿದ ತತ್ವಗಳು ನಾವೆಲ್ಲರೂ ಸದಾ ಸ್ಮರಿಸುವಂತಾಗಬೇಕೆಂದು ಹೇಳಿದರು.

ಈ ಸಂದರ್ಭದಲ್ಲಿ ಜಿಲ್ಲಾ ಕಾಂಗ್ರೆಸ್ ಉಪಾಧ್ಯಕ್ಷರುಗಳಾದ ಚಾಂದಸಾಬ ಗಡಗಲಾವ, ಡಾ.ಗಂಗಾಧರ ಸಂಬಣ್ಣಿ, ಬ್ಲಾಕ್ ಅಧ್ಯಕ್ಷ ಜಮೀರಅಹ್ಮದ ಬಕ್ಷಿ, ಆರತಿ ಶಹಾಪೂರ, ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ವಸಂತ ಹೊನಮೊಡೆ, ಸಾಹೇಬಗೌಡ ಬಿರಾದಾರ, ಅಶ್ಫಾಕ ಮನಗೂಳಿ, ಎಸ್‌ಟಿ ಘಟಕದ ಅಧ್ಯಕ್ಷರಾದ ದೇವಾನಂದ ಲಚ್ಯಾಣ, ಅಬ್ಬುಲ್‌ಪೀರಾ ಜಮಖಂಡಿ, ಫಿರೋಜ ಶೇಖ, ಅನಸೂಯಾ ನಿಂಬರಗಿ, ಆಸ್ಮಾ ಕಾಲೇಬಾಗ, ಶಮಿಮಾ ಅಕ್ಕಲಕೋಟ, ರುಬಿನಾ ಹಳ್ಳೂರ, ಕಾಶಿಬಾಯಿ ಹಡಪದ, ಗಂಗಾಬಾಯಿ ಕಣಮುಚನಾಳ, ಅಬುಬಕರ ಕಂಬಾಗಿ, ಕೃಷ್ಣಾ ಲಮಾಣಿ, ತಾಜುದ್ದೀನ ಖಲೀಫಾ, ಪರಶುರಾಮ ಹೊಸಮನಿ, ಮಂಜುನಾಥ ನಿಡೋಣಿ, ಜಾಫರ ಸುತಾರ, ಮಹೇಶ ಶಹಾಪೂರ, ವರ್ಷಾ ಭೋವಿ, ಹಮಿದಾ ಪಟೇಲ, ಮುಂತಾದವರು ಉಪಸ್ಥಿತ–ರಿದ್ದರು.

# ಭಯದಾಚೆಯ ಬದುಕು

ಭಾವರಶ್ಮಿ



ಡಾ. ರಾಜಶೇಖರ ನಾಗೂರ
(“ನಮ್ಮ ಕಥಾ ಅರಮನೆ” ಬರಹಗಾರರು)

ಉದಯರಶ್ಮಿ ದಿನಪತ್ರಿಕೆ

ಒಬ್ಬ ದೊಡ್ಡ ‘ಡಾನ್’ ದುಬೈ ಇಂದ ತನ್ನ ಊರಿಗೆ ವಾಪಸ್ಸು ಬರುತ್ತಾನೆ. ಅವನ ಕಂಡರೆ ಎಲ್ಲ–ರಿಗೂ ಭಯ. ತನ್ನ ಮೇಲಿನ ಭಯ ಇವರಿಗೆ ಎಷ್ಟಿದೆ ಎಂದು ಡಾನ್ ಗೆ ತಮಾಷೆ ಎನಿಸುತ್ತಿತ್ತು.

ಆ ಡಾನ್ ಶೇವಿಂಗ್ ಮಾಡಿಸಿಕೊಳ್ಳಲು ತನ್ನ ಊರಿನ ಒಂದು ಕ್ಷೌರಿಕನ ಶಾಪ್ ಗೆ ಬಂದು ಕ್ಷೌರಿಕನಿಗೆ ಹೇಳಿದ “ನೋಡು ಶೇವಿಂಗ್ ಮಾಡಲು ನಿನಗೆ ಐದು ಲಕ್ಷ ರೂಪಾಯಿ ಕೊಡುವೆ. ಆದ–ರೆ ಒಂದೇ ಒಂದು ಸಣ್ಣ ಗಾಯ ಮಾಡಿದರೆ ನಿನ್ನ ತಲೆಯಲ್ಲಿ ಎಲ್ಲಾ ಬುಲೆಟ್ ಗಳು ಸೇರುತ್ತವೆ”.

ಕ್ಷೌರಿಕ ಕೈ ಮುಗಿದು ನಿನ್ನ ದುಡ್ಡು ಬೇಡ ನಿನಗೆ ಶೇವಿಂಗ್ ಮಾಡುವ ಸಾಹಸವೂ ಬೇಡವೆಂದು ನಿರಾಕರಿಸುತ್ತಾನೆ.



ಡಾನ್ ಮತ್ತೊಬ್ಬ ಕ್ಷೌರಿಕನ ಹತ್ತಿರ ಹೋಗಿ ಅದೇ ಮಾತು ಹೇಳುತ್ತಾನೆ. ಆ ಕ್ಷೌರಿಕ ಕೂಡ ಹೆದರಿ ಕೈ ಮುಗಿದು ಕೊಟ್ಟ ಆಫರ್ ನ್ನು ನಿರಾಕರಿಸುತ್ತಾನೆ.

ಹೀಗೆ ಯಾವೊಬ್ಬ ಕ್ಷೌರಿಕನು ಮುಂದೆ ಬರಲಿಲ್ಲ.

ಕೊನೆಗೆ ಮೂಲೆಯಲ್ಲಿ ಒಬ್ಬ ಕ್ಷೌರಿಕ ಕೈಯಲ್ಲಿ ಶೇವಿಂಗ್ ಕತ್ತಿಯನ್ನು ಹಿಡಿದು, ಅದೇ ಕತ್ತಿಯನ್ನು ನೋಡುತ್ತಾ ಡಾನ್ ಗೆ ಹೇಳುತ್ತಾನೆ “ಭಾಯಿ ನಾನು ನಿಮಗೆ ಶೇವಿಂಗ್ ಮಾಡುತ್ತೇನೆ. ಬನ್ನಿ” ಎನ್ನುತ್ತಾನೆ. ಡಾನ್ ಗೆ ಆಶ್ಚರ್ಯವಾಗುತ್ತದೆ.

“ಹೌದಾ ನೀನು ನನಗೆ ಕ್ಷೌರ ಮಾಡುವೆಯ? ಕಂಡೀಷನ್ಸ್ ಗೊತ್ತಲ್ವಾ” ಎಂದು ಕೈ ಲಿರುವ ಗನ್ ನ್ನು ಮುಂದೆ ಇಟ್ಟು ಕುರ್ಚಿಯ ಮೇಲೆ ಆಸೀನನಾಗುತ್ತಾನೆ. ಕ್ಷೌರಿಕ ನಗುತ್ತಾ ಸ್ವಲ್ಪವೂ ಭಯಭೀತನಾಗದೆ ಕ್ಷೌರ ಮಾಡಿ ಮುಗಿಸುತ್ತಾನೆ.

ಆಶ್ಚರ್ಯ ಚಕಿತನಾಗಿ ಡಾನ್ ಆ ಕ್ಷೌರಿಕನಿಗೆ ಕೇಳಿದ ನಿನಗೆ



ಭಯವಾಗಲಿಲ್ಲವೇ ಎಂದು. ಆಗ ಕ್ಷೌರಿಕ ನಗುತ್ತಾ ಆತ್ಮ ವಿಶ್ವಾಸದಿಂದ ಹೇಳುತ್ತಾನೆ “ಭಾಯಿ ಕ್ಷೌರ ಮಾಡುವಾಗ ಒಂದು ಸಣ್ಣ ಗಾಯವಾಗಿದ್ದರೂ ಬ್ಲೇಡ್ ನನ್ನ ಕೈಯಲ್ಲೇ ಇತ್ತಲ್ವ.. ಒಂದೇ ಬಾರಿಗೆ ನಿಮ್ಮ ಕುತ್ತಿಗೆಯನ್ನು ಕ್ಷಣದಲ್ಲಿ ಕತ್ತರಿಸಿ ಬಿಡುತ್ತಿದ್ದೆ ಮತ್ತು ಆ ಕ್ಷಣದಿಂದ ನಾನೇ ಹೊಸ ಡಾನ್ ಆಗಿರುತ್ತಿದ್ದೆ.” ಎಂದು ನಸು ನಗುತ್ತಾನೆ. “ಹೀಗಾಗಿ ಭಯ ನನಗಿರಲಿಲ್ಲ” ಎನ್ನುತ್ತಾನೆ.

ಕ್ಷೌರಿಕನ ಆತ್ಮ ವಿಶ್ವಾಸ ಅವನಿಗೆ ಒಂದು ಕ್ಷೌರಕ್ಕೆ ಐದು ಲಕ್ಷವನ್ನು ಕೊಡ ಮಾಡಿತು.

ಭಯ ಮತ್ತು ಆತ್ಮವಿಶ್ವಾಸ (ನಮ್ಮ ಮೇಲಿನ ನಮ್ಮ ನಂಬಿಕೆ) ಎರಡೂ ಬದುಕಿನ ಬೇರೆ ಬೇರೆ ಆಯಾಮಗಳು. ಭಯದ ಆಚೆ ಬದುಕಿದೆ. ಆತ್ಮವಿಶ್ವಾಸವಿದ್ದವನು ಎಂತಹ ಭಯವನ್ನಾದರೂ ಎದು–ರಿಸಬಲ್ಲ.

ನಮ್ಮ ಮುಂದೆ ‘ಡಾನ್’ ತರ ಬದುಕಿನ ಸಮಸ್ಯೆಗಳು, ಸವಾಲುಗಳು ಇದ್ದರೆ, ಕ್ಷೌರಿಕನ ಕೈಯಲ್ಲಿಯ ಕತ್ತಿಯಂತೆ ನಮ್ಮ ಆತ್ಮವಿಶ್ವಾಸ ನಮ್ಮಲ್ಲಿರಲಿ. ಆಗ ಮಾತ್ರ ಬದುಕು ನಮ್ಮದಾಗುತ್ತದೆ.

– ಶಿವಮಂಗಲ್ ಸಿಂಹ ಸುಮನ್ ರವರ ಈ ಕೆಳಗಿನ ಸಾಲುಗಳು ಶ್ರೀ ಅಟಲ್ ಬಿಹಾರಿ ವಾಜಪೇಯಿ ರವರಿಗೆ ತುಂಬಾ ಪ್ರೀಯವಾದ ಸಾಲುಗಲಾಗಿದ್ದವು. ಈ ಸಾಲುಗಳು ನನಗೂ ಕೂಡ ಇಷ್ಟ □

“ಸೋಲಿರಲಿ ಗೆಲುವಿರಲಿ

ಖಿಂಚಿತ್ತು ಭಯಬೀತ ನಾನಿಲ್ಲ.

ಖರ್ತವ್ಯದ ದಾರಿಯಲಿ ಏನೇ ಸಿಗಲಿ,

ಇದೂ ಕೂಡ ಸರಿ, ಅದೂ ಕೂಡ ಸರಿ.

ಏನೇ ಆಗಲಿ ಯಾವ ವರದಾನ ನಾ ಕೇಳುವುದಿಲ್ಲ, ಆದರೆ ಸೋಲನ್ನು ಮಾತ್ರ ನಾ ಎಂದಿಗೂ ಒಪ್ಪಿಕೊಳ್ಳಲ್ಲ”.

ಆತ್ಮವಿಶ್ವಾಸ ನಮ್ಮದಾಗಲಿ

# ಗಾಂಧಿ ಭವನದಲ್ಲಿ ಹುತಾತ್ಮ ದಿನ ಆಚರಣೆ



ಉದಯರಶ್ಮಿ ನ್ಯೂಸ್

ವಿಜಯಪುರ: ಜಿಲ್ಲಾಡಳಿತದ ವತಿಯಿಂದ ವಿಜಯಪುರ ನಗರದ ಗಾಂಧಿ ಭವನದಲ್ಲಿ ಹುತಾತ್ಮ ದಿನಾಚರಣೆ ಕಾರ್ಯಕ್ರಮವು ಹಮ್ಮಿಕೊಳ್ಳಲಾಯಿತು.

ಮಂಗಳವಾರ ನಗರದ ಜಿಲ್ಲಾ ಪಂಚಾಯತ್ ರಸ್ತೆಯಲ್ಲಿರುವ ಗಾಂಧಿಭವನದಲ್ಲಿ ಹಮ್ಮಿಕೊಂಡ ಹುತಾತ್ಮ ದಿನಾಚರಣೆ ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಟಿ.ಭೂಬಾಲನ್ ಅವರು ಮಾತನಾಡಿ, ನಗರದ ಜಿಲ್ಲಾ ಪಂಚಾಯತ್ ರಸ್ತೆಯಲ್ಲಿರುವ ಗಾಂಧಿಭವನವು ಸೆಪ್ಟಂಬರ್ 30ಕ್ಕೆ ಉದ್ಘಾಟನೆಗೊಂಡು ಸಾರ್ವಜನಿಕ ವೀಕ್ಷಣೆಗೆ ಮುಕ್ತಗೊಳಿಸಲಾಗಿದೆ. ಗಾಂಧಿ ಭವನದಲ್ಲಿ ಮಹಾತ್ಮ ಗಾಂಧೀಜಿಯವರ ತತ್ವಾದರ್ಶದ ಅಂಶಗಳನ್ನು ಅಳವಡಿಸಲಾಗಿದೆ ಎಂದು ಹೇಳಿದರು.

ಗಾಂಧಿಭವನವನ್ನು ಪ್ರೇರಣಾ ತಾಣವನ್ನಾಗಿಸಲು ರೂಪುರೇಷೆ ಕೈಗೊಳ್ಳಲಾಗುತ್ತಿದೆ. ಸಾರ್ವಜನಿಕರು, ಶಾಲಾ ವಿದ್ಯಾರ್ಥಿಗಳು ಗಾಂಧಿಭವನಕ್ಕೆ ಭೇಟಿ ನೀಡಿ ಗಾಂಧೀಜಿಯವರು ಸ್ವಾತಂತ್ರ್ಯಕ್ಕಾಗಿನ ಹೋರಾಟಗಳು, ಸತ್ಯ ಅಹಿಂಸೆ ಮಾರ್ಗಗಳ ಹಲವು ವಿಚಾರಗಳನ್ನೊಳಗೊಂಡ ವಿಷಯಗಳು ಮಾಹಿತಿಯನ್ನು ತಿಳಿದುಕೊಳ್ಳಬಹುದಾಗಿದ್ದು, ಗಾಂಧಿಭವನಕ್ಕೆ ಭೇಟಿ ನೀಡುವ ಮೂಲಕ ಮಹಾತ್ಮ ಗಾಂಧೀ–ಜಿಯವರ ತತ್ವಾದರ್ಶಗಳ ಕುರಿತು ಅರಿತುಕೊಳ್ಳಬೇಕು. ಇಂದಿನ ಪೀಳಿಗೆ ಗಾಂಧೀಜಿ ಅವರ ಚಿಂತನೆ ಅವರ ವಿಚಾರಗಳನ್ನು ಅರಿತುಕೊಳ್ಳಬೇಕು ಎಂದು ಹೇಳಿದರು.

ಹಿರಿಯ ಸಿವ್ಹಿಲ್ ನ್ಯಾಯಾಧೀಶರು ಆದ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಂತೋಷ ಕುಂದರ್ ಅವರು ಮಾತನಾಡಿ, ಬಾಪೂಜಿ ಅವರ ಸತ್ಯ ಮತ್ತು ಅಹಿಂಸಾ ತತ್ವಗಳು ಈ ಎರಡೂ ವಿಚಾರಗಳನ್ನು ಅರಿತುಕೊಳ್ಳಬೇಕು. ವಿದ್ಯಾರ್ಥಿ ದೆಸೆಯಿಂದಲೇ ಇಂತಹ ದಾರ್ಶನಿಕ, ಮಹಾತ್ಮರ ಆದರ್ಶ ವಿಚಾರಗಳನ್ನು ತಿಳಿದುಕೊಂಡು ನಡೆಯಬೇಕು ಎಂದು ಹೇಳಿದರು.

ಸ್ವಾತಂತ್ರಕ್ಕಾಗಿ ಹೋರಾಡಿದ ಮಹನೀಯರ, ದೇಶ ರಕ್ಷಣೆಯಲ್ಲಿ ಪ್ರಾಣತೆತ್ತು ಹುತಾತ್ಮರಾದ ಹುತಾತ್ಮರಿಗೆ ನಮನ ಸಲ್ಲಿಸಲಾಯಿತು.

ಇದಕ್ಕೂ ಮೊದಲು ಬೆಳಿಗ್ಗೆ ಗಾಂಧಿ ಭವನದಲ್ಲಿ ಅಪರ ಜಿಲ್ಲಾಧಿಕಾರಿ ಮಹಾದೇವ ಮುರಗಿ ಹಾಗೂ ಇತರ ಅಧಿಕಾರಿಗಳೊಂದಿಗೆ ಸ್ವಚ್ಛತಾ ಶ್ರಮದಾನ ಮಾಡಿದರು.

ಕಾರ್ಯಕ್ರಮದಲ್ಲಿ ಉಪನ್ಯಾಸಕರಾದ ಶ್ರೀಮತಿ ಪಾಟೀಲ ಅವರು ವಿಶೇಷ ಉಪನ್ಯಾಸ ನೀಡಿದರು. ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಾಯಕ ನಿರ್ದೇಶಕ ಅಮರೇಶ ದೊಡಮನಿ, ನೆಹರು ಯುವ ಕೇಂದ್ರ ಜಿಲ್ಲಾ ಯುವ ಅಧಿಕಾರಿ ರಾಹುಲ್ ಡೋಂಗ್ರೆ, ಡಾ.ರಿಯಾಜ ಫಾರೂಖಿ, ಪೀಟರ್ ಅಲೆಕ್ಸಾಂಡರ್, ನಿಲೇಶ ಬೇನಾಳ ಸೇರಿದಂತೆ ವಿದ್ಯಾರ್ಥಿಗಳು, ಬೋಧಕ–ಬೋಧಕೇತರ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಫೆ.2ರಂದು ಸಿಎಂಗೆ ಕಪ್ಪು ಬಾವುಟ ಪ್ರದರ್ಶನ ಎಚ್ಚರಿಕೆ

ಉದಯರಶ್ಮಿ ನ್ಯೂಸ್



ಮುದ್ದೇಬಿಹಾಳ: ಪಟ್ಟಣದ ಪಿಎಲ್‌ಡಿ ಬ್ಯಾಂಕ್ ನ ಅವ್ಯವಹಾರ ತನಿಖೆಗಾಗಿ ಮತ್ತು ಪಟ್ಟಣದ ಅಂಬೇಡ್ಕರ್ ವೃತ್ತದ ಡಾ.ಬಾಬಾಸಾಹೇಬ ಅಂಬೇಡ್ಕರ್ ಮೂರ್ತಿಯ ಅಪೂರ್ಣವಾದ ಕಾಮಗಾ–ರಿಯನ್ನು ಪೂರ್ತಿಗೊಳಿಸುವಂತೆ ಜಿಲ್ಲಾಧಿಕಾರಿಗಳು ಸೇರಿದಂತೆ ಜನಪ್ರತಿನಿಧಿಗಳಿಗೆ ಮನವಿ ಮಾಡಿದ್ದು, ಯಾವುದೇ ಕ್ರಮವಾಗದ ಹಿನ್ನೆಲೆ ಫೆ.2 ರಂದು ಮುಖ್ಯಮಂತ್ರಿಗಳ ಆಗಮನದ ವೇಳೆ ಕಪ್ಪು ಬಾವುಟ ಪ್ರದರ್ಶಿಸಲು ಸಿದ್ಧರಾಗಿದ್ದೇವೆ ಎಂದು ಡಿ.ಎಸ್.ಎಸ್.ಮುಖಂಡ ಹರೀಶ ನಾಟೆಕಾರ ಹೇಳಿದರು.

ಪಟ್ಟಣದ ಪ್ರವಾಸಿ ಮಂದಿರದ ಗಾರ್ಡನ್ ನಲ್ಲಿ ವಿವಿಧ ಸಂಘಟನೆಗಳು ನಡೆಸಿದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು.

ಕಾಂಗ್ರೆಸ್ ಪಕ್ಷಕ್ಕೆ ಅಧಿಕಾರ ಬಂದಾಗಿನಿಂದ ಪ್ರತೀ ಮಾತಿಗೆ ಡಾ.ಬಾಬಾ ಸಾಹೇಬರ, ಬಸವಣ್ಣನವರ ಹೆಸರು ಹೇಳುವ ಇವರು, ಮೂರ್ತಿ ಕಾಮಗಾರಿಯನ್ನು ಪೂರ್ಣಗೊಳಿಸಲು ಮುಂದಾಗುತ್ತಿಲ್ಲ. ಸಿಎಂ ಬರಲು ಇನ್ನೂ ಎರಡು ದಿನ ಇದೆ. ಕೂಡಲೇ ಹಣ ಬಿಡುಗಡೆಗೊಳಿಸಿ ಕಾಮಗಾರಿಯನ್ನು ಪೂರ್ಣಗೊಳಿಸಬೇಕು. ಇಲ್ಲಿದ್ರೆ ನಾವು ಹೋರಾಟ ಮುಂದುವರೆಸುತ್ತೇವೆ. ನಮ್ಮನ್ನು ಬಂಧಿಸಿದರೂ ಜೈಲಿನಲ್ಲಿಯೇ ಧರಣಿ, ಉಪವಾಸ ಸತ್ಯಾಗ್ರಹ ಹಮ್ಮಿಕೊಳ್ಳಲಿದ್ದೇವೆ ಎಂದರು.

ಮುಖಂಡ ಬಸವರಾಜ ಸಿದ್ದಾಪೂರ ಮಾತನಾಡಿ, ಪಿಎಲ್‌ಡಿ ಬ್ಯಾಂಕಿನ ಅಧ್ಯಕ್ಷರ, ದಬ್ಬಾಳಿಕೆ, ದುರ್ವರ್ತನೆ, ದೌರ್ಜನ್ಯ, ಎಸ್‌ಸಿ–ಎಸ್‌ಟಿ ಅನುದಾನ ದುರ್ಬಳಕೆ, ಬ್ಯಾಂಕಿನ ಅವ್ಯವಹಾರಗಳನ್ನು ಖಂಡಿಸಿ ಈಗಾಗಲೇ ಪಿಎಲ್‌ಡಿ ಬ್ಯಾಂಕ್ ಆವರಣದಲ್ಲಿ ವಿವಿಧ ಹಂತಗಳ ಹೋರಾಟ ನಡೆಸಿದರೂ ಯಾವುದೇ ಕ್ರಮವಾಗಿಲ್ಲ. ಈ ಬಗ್ಗೆ ಜಿಲ್ಲಾ ಸಹಕಾರಿ ಅಧಿಕಾರಿಗಳು ಕ್ರಮ ಜರುಗಿಸುವದಾಗಿ ಗಡುವು ನೀಡಿದ್ದರು. ಗಡುವು ಮುಗಿದರೂ ಯಾವುದೇ ಕ್ರಮ ಕೈಗೊಂಡಿಲ್ಲ. ಬದಲಾಗಿ ಸಿಎಂ ನಮ್ಮ ಜಾತಿಯವರು, ನನಗೆ ಆತ್ಮೀಯ ಸ್ನೇಹಿತ. ನಾನು ಯಾವುದಕ್ಕೂ ಹೆದರಲ್ಲ ಎಂಬ ಮಾತುಗಳನ್ನು ಅಧ್ಯಕ್ಷ ಬಿ.ಕೆ.ಬಿರಾದಾರ ಆಡಿದ ಬಗ್ಗೆ ನಮ್ಮ ಗಮನಕ್ಕೆ ಬಂದಿದೆ. ಈ ಎಲ್ಲ ಆರೋಪಗಳ ಬಗ್ಗೆ ಯಾವುದೇ ಕ್ರಮವಾಗದ ಹಿನ್ನೆಲೆ ಮತ್ತು ಪಟ್ಟಣ ಸೇರಿದಂತೆ ನಾಲತವಾಡ, ತಾಳಿಕೋಟೆಯಲ್ಲಿ ಅಂಬೇಡ್ಕರ್ ಮೂರ್ತಿ ಕಾಮಗಾರಿ ಅರ್ಧಕ್ಕೆ ನಿಂತಿರುವ ವಿಷಯಗಳ ಅನುಸಾರ ನಾವು ಸಿಎಂ ಅಗಮನದ ವೇಳೆ ಕಪ್ಪು ಬಾವುಟ ಪ್ರದರ್ಶಿಸಲು ತೀರ್ಮಾನಿಸಿದ್ದೇವೆ ಎಂದರು.

ಇದೇ ವೇಳೆ ಕೆರೆಗಳಿಗೆ ನೀರು ತುಂಬುವಂತೆ ರೈತಪರ ಸಂಘಟನೆಗಳ ಮುಖಂಡರು ಸಂಬಂಧಿಸಿದ ಅಧಿಕಾ–ರಿಗಳಿಗೆ ಮನವಿ ಮಾಡಿಕೊಂಡರು.

ಈ ವೇಳೆ ದೇವಪ್ಪ ಹುನಕುಂಟಿ, ಮಹಾಂತೇಶ ತಮದಡ್ಡಿ, ಪ್ರಕಾಶ ಜಲಪೂರ, ಶರನು ಸರೂರ, ಲವಕುಮಾರ ದೊಡ್ಡಮನಿ, ರಾಹುಲ ಕಟ್ಟಿಮನಿ, ಗುಂಡಪ್ಪ ಚಲವಾದಿ, ಈಶ್ವರ ಗುಡ್ನಾಳ ಸೇರಿದಂತೆ ಮತ್ತೀತರರು ಇದ್ದರು.

# ಕಾವ್ಯರಶ್ಮಿ


## ಕುಡಿನೋಟ

–ಎಂ.ಹರಿಣಿ ಚಿನ್ನಿ ಮೋಹನಾ
(“ನಮ್ಮ ಕಥಾ ಅರಮನೆ” ಬರಹಗಾರರು)



ಎನಿತು ಬಣ್ಣಿಸಲಿ ಅವನ ಕುಡಿನೋಟವನು
ಅವನೊಂದು ನೋಟಕೆ ಸೋತು ಶರಣಾಗಿರುವೆನು
ಎನಿತು ತಿಳಿಸಲೆನಗವನು ಕಾಡಿದ ಪರಿಯನು
ಇನಿತಿನಿತೇ ನನ್ನೊಳಗೆಲ್ಲಾ ಸೇರಿ ಬೆರೆತುಹೋದನು..

ಭಾವ ಸುಮವರಳಿ ಸುತ್ತೆಲ್ಲಾ ಪರಿಮಳವರಡಿದೆ
ಮೋಹದಿ ಮಳೆಸುರಿದೆನ್ನ ಹಗಲಿರುಳು ಕಾಡುತಿದೆ
ಬಾರದವನಿಗಾಗಿಯೇ ಅನುದಿನ ಕಾದು ಪರಿತಪಿಸಿದೆ
ಈ ಜೀವ ಕ್ಷಣಕ್ಷಣವು ಅವನಿಗಾಗಿಯೆ ಒದ್ದಾಡುತಿದೆ..



ನೆನಪಿನಂಗಳದ ಸುತ್ತಾ ಅವನ ನೆನಪುಗಳೇ ನಗುತ್ತಾ
ಅವನನುರಾಗದಿ ಜೀವ ತಂತಿಯನು ಮೀಟುತ್ತಾ
ಕಣಕಣವೂ ಅರಿಯದೆಯೆ ಅವನೆಸರನೆ ಜಪಿಸುತ್ತಾ
ಕಾದಿರುವೆನು ರಾಧೆಯಾಗಿ ಉಸಿರು ಬಿಗಿಹಿಡಿಯುತ್ತಾ..